# ಕರಾವಳಿ ತರಂಗಿಣಿ

ಕಡಲ ಕಿನಾರೆಯಿಂದ ಕೆಂಪು ಕೋಟೆಯವರೆಗೆ..

ಕನ್ನಡ ವಾರಪತ್ರಿಕೆ


**ಸುಭಾಷಿತ:**

ಮಾತೃದೇವತೆಯ ಕೋಪ ಬದುಕು ಕಳೆಸುವುದು
ಜನುಮದಾತನ ಕೋಪ ದಾರಿ ಸುಗಮಗೊಳಿಸುವುದು
ಗುರುವಿನ ಕೋಪ ಜ್ಞಾನಾಭಿವೃದ್ಧಿ ಮಾಡುವುದು
ಹೆಣ್ಣಿನ ಕೋಪ ಜೀವನವನ್ನೇ ಮುಗಿಸುವುದು
ವೈರಾಗಿಯ ಕೋಪ ಮತಿ ಕೆಡಿಸುವುದು
ಹಿರಿಯರ ಕೋಪ ಕರ್ಮ ಹೆಚ್ಚಿಸುವುದು
ದೇವಾದಿ ದೇವತೆಯ ಕೋಪ ಕುಂಠಿತಗೊಳಿಸುವುದು
ಬಡವನ ಕೋಪ ದವಡೆಗೆ ಮೂಲವಾಗುವುದು
ಅನ್ನದಾತನ ಕೋಪ ಹಸಿವಿನಿಂದ ನರಳಿಸುವುದು
ಕೋಪ ತಾಪವ ಬಿಟ್ಟು ಬದುಕಿದರೆ ಮುಕ್ತಿ ಸಿಗುವುದು

**ಭಗವಾನ್ ಶ್ರೀಕೃಷ್ಣ**




PRGI No: KNKAN/25/A2498 www.karavalitharangini.com KARAVALI THARANGINI KANNADA Weekly Dakshina Kannada ದಿನಾಂಕ: 02-01-2026 to 08-01-2026 ಬೆಲೆ:10-00 ಸಂಪುಟ–1 ಸಂಚಿಕೆ–14 ಪುಟಗಳು–6







ಕರಾವಳಿ ಜಿಲ್ಲೆಯ ಜನರ ನೆಚ್ಚಿನ ಜನಪದ ಕ್ರೀಡೆಗಳಲ್ಲಿ ಕಂಬಳ ಮೊದಲ ಸ್ಥಾನ ಪಡೆದಿದೆ. ಇಲ್ಲಿ ಎಲ್ಲರೂ ಜಾತಿ, ಮತ ಮರೆತು ಕಂಬಳದಲ್ಲಿ ಭಾಗಿಯಾಗುತ್ತಾರೆ. ಇಂದಿನ ಆಧುನಿಕ ಪ್ರಪಂಚದಲ್ಲಿ ಸಾಮಾಜಿಕ ಜಾಲತಾಣಗಳ ಅರ್ಭಟದಿಂದಲೋ ಏನೋ ಜನಪದ ಕಲೆ, ಕ್ರೀಡೆಗಳು ಜಗತ್ತಿನಾದ್ಯಂತ ಕಂಪನ್ನು ಪಸರಿಸುತ್ತಿದೆ. ಇಂದಿನ ಆಧುನಿಕತೆಗೆ ತಕ್ಕಂತೆ ಕಂಬಳದ ಜೊತೆ ಜೊತೆಗೆ ಛಾಯಚಿತ್ರ ಸ್ಪರ್ಧೆ, ಚಿತ್ರಕಲಾ ಸ್ಪರ್ಧೆ ಮುಂತಾದ ಹಲವಾರು ಸ್ಪರ್ಧೆಗಳನ್ನು ಜೋಡಿಸಿಕೊಂಡು ಸಂಘಟಕರು ಕಂಬಳವನ್ನು ಇನ್ನಷ್ಟು ಆಕರ್ಷಣೀಯವಾಗಿಸುತ್ತಿದ್ದಾರೆ.

## ಬುಡಕಟ್ಟು ಭಾಷೆಗಳಿಗೆ ಅಕಾಡೆಮಿ ಅಗತ್ಯ: ತೇಜಕುಮಾರ್



**ಸುಳ್ಯ:** ಪ್ರಚಲಿತದಲ್ಲಿರುವ ಹವ್ಯಗನ್ನಡಕ್ಕೆ ಅಕಾಡೆಮಿ ಬೇಕು. ಬುಡಕಟ್ಟು ಹಾಗೂ ನಿರ್ಲಕ್ಷಿತ ಭಾಷೆಗಳಿಗೆ ಹಂತ ಹಂತವಾಗಿ ಅಕಾಡೆಮಿ ಸ್ಥಾಪನೆಯಾಗಬೇಕು. ಇದರಿಂದ ಈ ಭಾಷೆಗಳಿಂದ ಬಂದಿರುವ ಸಂಸ್ಕೃತಿ ಉಳಿದೀತು ಎಂದು ಸುಳ್ಯ ತಾಲ್ಲೂಕು ಕನ್ನಡ ಸಾಹಿತ್ಯ ಸಮ್ಮೇಳನ ಅಧ್ಯಕ್ಷ, ಸಾಹಿತಿ ತೇಜಕುಮಾರ್ ಬಡ್ಡಡ್ಕ ಹೇಳಿದ್ದಾರೆ. ಭಾಷೆಗಳ ಅಳಿವಿನೊಂದಿಗೆ ಸಂಸ್ಕೃತಿಗಳು ಕೂಡ ನಾಶವಾಗುತ್ತಿದೆ. ನಮ್ಮ ಸುತ್ತ ನೋಡಿದರೆ ಅದು ನಮಗೆ ಅರ್ಥವಾಗಬಲ್ಲದು. ನಮ್ಮೂರ ಸಾಹಿತ್ಯದ ಉನ್ನತಿಗೆ ಕಾರಣವಾಗಿದ್ದು ಇಲ್ಲಿನ **3ನೇ ಪುಟಕ್ಕೆ**

## ನನಗೂ ಆಕಾಂಕ್ಷೆ ಇದೆ –ಪರಮೇಶ್ವರ್



**ಬೆಂಗಳೂರು:** ಹೈಕಮಾಂಡ್ ತೀರ್ಮಾನಿಸಿದರೆ ರಾಜಕೀಯ ಪದೋನ್ನತಿ ಆಗುತ್ತದೆ. ಎಲ್ಲರ ರೀತಿಯಲ್ಲಿ ನನಗೂ ಆಕಾಂಕ್ಷೆ ಇದೆ. ಯಾಕೆ ಇರಬಾರದ ಎಂದು ಗೃಹ ಸಚಿವ ಡಾ. ಜಿ. ಪರಮೇಶ್ವರ್ ಸೂಚ್ಯವಾಗಿ ತಾನು ಮುಖ್ಯಮಂತ್ರಿ ರೇಸ್‌ನಲ್ಲಿ ಇರುವುದನ್ನು ನುಡಿದರು. ಸದಾಶಿವನಗರ ನಿವಾಸದ ಬಳಿ ಮಾಧ್ಯಮದವರೊಂದಿಗೆ ಮಾತನಾಡಿದ ಅವರು, ನಿಮಗೆ ರಾಜಕೀಯ ಪದೋನ್ನತಿ ಸಿಗಲಿದೆಯೇ ಎಂಬ ಪ್ರಶ್ನೆಗೆ ಉತ್ತರಿಸುತ್ತಾ, ಅದು ನಮ್ಮ ಹೈಕಮಾಂಡ್‌ಗೆ ಬಿಟ್ಟದ್ದು. ಹೈಕಮಾಂಡ್ ತೀರ್ಮಾನ ಮಾಡಿದರೆ ಆಗುತ್ತೆ. ನಾನು ಈವರೆಗೂ ಆಶಾವಾದಿಯಾಗಿಯೇ ಬದುಕಿದ್ದೇನೆ, ಅದೇನು ಹೊಸದಾಗಿ ಆಗಬೇಕು ಅಂತೇನಿಲ್ಲ. ಎಲ್ಲರಿಗೂ ಜೀವನದಲ್ಲಿ ಏನೇನೋ ಆಗಬೇಕು ಅಂತೆಲ್ಲ ಇರುತ್ತೆ. ಮನುಷ್ಯನಿಗೆ ಆಕಾಂಕ್ಷೆ **3ನೇ ಪುಟಕ್ಕೆ**

## ಸಮಗ್ರ ತನಿಖೆಗೆ ಎಸ್‌ಐಟಿ ರಚಿಸಬೇಕು –ಡಾ. ಭರತ್ ಶೆಟ್ಟಿ

**ಮಂಗಳೂರು:** ಕೋಗಿಲು ಬಡಾವಣೆಯಲ್ಲಿ ಅಕ್ರಮವಾಗಿ ನೆಲೆಸಿದ್ದವರ ಬಗ್ಗೆ ಸಮಗ್ರ ತನಿಖೆಗೆ ಎಸ್ ಐಟಿ ರಚಿಸಬೇಕೆಂದು ಶಾಸಕ ಭರತ್ ಶೆಟ್ಟಿ ಆಗ್ರಹಿಸಿದ್ದಾರೆ. ಅವರು ತಮ್ಮ ಕಛೇರಿಯಲ್ಲಿ ನಡೆದ ಪತ್ರಿಕಾ ಗೋಷ್ಠಿಯಲ್ಲಿ ಮಾತನಾಡಿ, ಬೆಂಗಳೂರಿನ ಕೋಗಿಲು ಬಡಾವಣೆಯಲ್ಲಿ ಅಕ್ರಮವಾಗಿ ನೆಲೆಸಿದ್ದ ವಲಸಿಗರು ಯಾರು? ಅವರು ಅಲ್ಲಿಗೆ ಬಂದು ನೆಲೆಸಲು ಅವಕಾಶ ಕೊಟ್ಟಿದ್ದು ಯಾರು, ಅವರು ಬಂದಿದ್ದು ಏಕೆ? ಅವರು ಬಂದಿದ್ದು ಎಲ್ಲಿಂದ ಎಂಬ ಬಗ್ಗೆ ಸಮಗ್ರ ತನಿಖೆಯಾಗಬೇಕು. ಇದಕ್ಕಾಗಿ ಸರ್ಕಾರ ವಿಶೇಷ **3ನೇ ಪುಟಕ್ಕೆ**









# ಸುದ್ದಿ ತುಣುಕು

ರಾಜ್ಯದೆಲ್ಲೆಡೆ ಹೊಸ ವರ್ಷದ ಸಂಭ್ರಮ ಜೋರಾಗಿತ್ತು. ಬಣ್ಣ ಬಣ್ಣದ ಪಟಾಕಿ ಸಿಡಿಸಿ, ಕೇಕ್ ಕತ್ತರಿಸಿ ಹೊಸ ವರ್ಷ 2026ನ್ನು ಬರಮಾಡಿಕೊಳ್ಳಲಾಯಿತು.

ರಾಜ್ಯದ ಪ್ರಮುಖ ಶಿಕ್ಷಣ ತಜ್ಞರು, ಉದ್ಯಮಿ ಮತ್ತು ಸಮಾಜ ಸೇವಕರಾದ ವಿನಯ ಹೆಗ್ಡೆ ನಿಧನ ಹೊಂದಿದ್ದಾರೆ.

ಪರಿಶಿಷ್ಟ ಜಾತಿ ಮತ್ತು ಪರಿಶಿಷ್ಟ ಪಂಗಡದ ಕುಟುಂಬಗಳು ಸೇರಿದಂತೆ ಒಟ್ಟು 6,322 ರೈತ ಕುಟುಂಬಗಳಿಗೆ ವಿದ್ಯುತ್ ಸಂಪರ್ಕದೊಂದಿಗೆ ಕೊಳವೆಬಾವಿ ಸೌಲಭ್ಯ ಒದಗಿಸಲು ಅನುಮೋದನೆ ನೀಡಲಾಗಿದೆ ಎಂದು ಸಚಿವರು ತಿಳಿಸಿದ್ದಾರೆ.

48 ಐಪಿಎಸ್ ಅಧಿಕಾರಿಗಳಿಗೆ ವರ್ಗಾವಣೆ ಮತ್ತು ಮುಂಬಡ್ತಿ ನೀಡಿ ರಾಜ್ಯ ಸರ್ಕಾರ ಆದೇಶಿಸಿದೆ.

ಹುಬ್ಬಳ್ಳಿ ತಾಲೂಕಿನ ಇನಾಂ ವೀರಾಪುರ ಗ್ರಾಮಕ್ಕೆ ಗೃಹ ಸಚಿವ ಡಾ.ಜಿ.ಪರಮೇಶ್ವರ್ ಭೇಟಿಯಾಗಿ, ಹತ್ಯೆಗೀಡಾದ ಮಾನ್ಯ ಅವರ ಪತಿಯ ಕುಟುಂಬಕ್ಕೆ ಸಾಂತ್ವನ ಹೇಳಿದರು.

ಕೋವಿಡ್ ಸಂದರ್ಭದಲ್ಲಿ ನಡೆದಿದೆ ಎನ್ನಲಾದ ಅಕ್ರಮಗಳ ತನಿಖೆ ಕೈಗೊಂಡ ಹೈಕೋರ್ಟ್ ನಿವೃತ್ತ ನ್ಯಾಯಮೂರ್ತಿ ಜಾನ್ ಮೈಕಲ್ ಕುನ್ಹಾ ಅವರ ವಿಚಾರಣಾ ಆಯೋಗವು ಅಂತಿಮ ವರದಿಯನ್ನು ಸಲ್ಲಿಸಿದೆ.

ಮೈಸೂರು ಅರಮನೆಯ ವರಾಹ ಗೇಟ್ ಬಳಿ ಅನಧಿಕೃತವಾಗಿ ಹಲವು ವರ್ಷಗಳಿಂದ ತಲೆಯೆತ್ತಿ ನಿಂತಿದ್ದ ಗೂಡಂಗಡಿಗಳನ್ನು ತೆರವುಗೊಳಿಸಲಾಗಿದೆ.

"ಕೈಗಾರಿಕೆ ಸ್ಥಾಪನೆ ಮಾಡುವ ಮನಸ್ಸು ಅಧಿಕಾರದಲ್ಲಿರುವವರಿಗೆ ಇಲ್ಲ. ಮಂಡ್ಯ ಜಿಲ್ಲಾ ಉಸ್ತುವಾರಿ ಸಚಿವರಿಗೆ ಇಚ್ಛಾಶಕ್ತಿ ಕೊರತೆ ಇದೆ" ಎಂದು ಮಾಜಿ ಸಚಿವ ಡಿಸಿ ತಮ್ಮಣ್ಣ ಕಿಡಿಕಾರಿದರು.

ಬೆಳಗಾವಿ ಮಹಾನಗರ ಪಾಲಿಕೆ ಮೇಯರ್ ಮಂಗೇಶ ಪವಾರ ಮತ್ತು ಉಪ ಮೇಯರ್ ವಾಣಿ ಜೋಶಿ "ಸೆಲ್ಫಿ ವಿಥ್ ಸಫಾಯಿ ಮಿತ್ರ" ಅಭಿಯಾನವನ್ನು ಕಳೆದ ಒಂದು ತಿಂಗಳಿನಿಂದ ಶುರು ಮಾಡಿದ್ದಾರೆ.

ತಾಯಿ ಹುಲಿಯೊಂದಿಗೆ ನಾಲ್ಕು ಮರಿ ಹುಲಿಗಳು ಬೀಡುಬಿಟ್ಟಿರುವ ಚಾಮರಾಜನಗರ ತಾಲೂಕಿನ ನಂಜೇದೇವನಪುರ ಸಮೀಪ ಗಂಡು ಹುಲಿಯೊಂದು ಕಾಣಿಸಿಕೊಂಡಿದ್ದು, ಸೆರೆ ಹಿಡಿಯಲಾಗಿದೆ.

ಸರ್ಕಾರದ ವತಿಯಿಂದಲೇ ಆರೋಗ್ಯ ಕವಚ–108 ನಿರ್ವಹಣೆ ಮಾಡಲು ಆರೋಗ್ಯ ಇಲಾಖೆ ಸಕಲ ಸಿದ್ಧತೆ ನಡೆಸುತ್ತಿದೆ ಎಂದು ಆರೋಗ್ಯ ಸಚಿವ ಗುಂಡೂರಾವ್ ತಿಳಿಸಿದ್ದಾರೆ.

ಗುಜರಾತ್‌ನ ಕೇಂದ್ರವೊಂದರಲ್ಲಿ ರೈಲ್ವೆ ನೇಮಕಾತಿ ಪರೀಕ್ಷೆಗೆ ಹಿಜಾಬ್ ಧರಿಸಿ ಬಂದಿದ್ದ ಮಹಿಳಾ ಅಭ್ಯರ್ಥಿಯನ್ನು ನಿಂದಿಸಿ, ಪರೀಕ್ಷೆ ಬರೆಯಲು ಬಿಟ್ಟಿಲ್ಲ ಎಂದು ಜಮೈತ್ ಉಲೇಮಾ ಎ ಹಿಂದ್ ಆರೋಪಿಸಿದೆ.

ಹೈದರಾಬಾದ್ ನಗರವನ್ನು ಮಾಲಿನ್ಯ ಮುಕ್ತವಾಗಿಸುವ ಗುರಿ ಇದ್ದು, ಸಂಪೂರ್ಣವಾಗಿ ಪ್ಲಾಸ್ಟಿಕ್ ನಿಷೇಧಿಸಲಾಗುವುದು ಎಂದು ಮುಖ್ಯಮಂತ್ರಿ ರೇವಂತ್ ರೆಡ್ಡಿ ತಿಳಿಸಿದರು.

ಪರೀಕ್ಷೆ ಪಾಸಾಗದ ಲೋಕೋ ಪೈಲಟ್‌ಗಳು 130 ಕಿಲೋಮೀಟರ್ ಗಿಂತ ಹೆಚ್ಚಿನ ವೇಗದ ಎಕ್ಸ್‌ಪ್ರೆಸ್ ರೈಲನ್ನು ಓಡಿಸಲು ಅರ್ಹರಲ್ಲ ಎಂದು ರೈಲ್ವೆ ವಿಚಾರಣಾ ವರದಿ ಹೇಳಿದೆ.

ಮಮತಾ ಬ್ಯಾನರ್ಜಿಗೆ ಊಹಿಸಲೂ ಸಾಧ್ಯವಾಗದ ಮಾತುಗಳಲ್ಲಿ ಬೆದರಿಕೆ ಹಾಕಿದ್ದು, ಇದು ಕೇಂದ್ರ ಗೃಹ ಸಚಿವರಿಗೆ ಮಾತ್ರವಲ್ಲದೆ ದೇಶದ ಇಡೀ ಜನಸಂಖ್ಯೆಗೆ ಬೆದರಿಕೆಯಾಗಿದೆ ಎಂದು ಬಿಜೆಪಿ ವಕ್ತಾರರು ವಾಗ್ದಾಳಿ ನಡೆಸಿದರು.

ಚಮೋಲಿ ಜಿಲ್ಲೆಯ ವಿಷ್ಣುಗಡ್–ಪಿಪಲ್ಕೋಟಿ ಜಲವಿದ್ಯುತ್ ಯೋಜನೆಯ ಸುರಂಗದ ಪಿಪಲ್ಕೋಟಿ ಸುರಂಗದೊಳಗೆ ಲೋಕೋ ರೈಲು ಸರಕು ರೈಲಿಗೆ ಡಿಕ್ಕಿ ಹೊಡೆದು ಸುಮಾರು 60 ಜನರು ಗಾಯಗೊಂಡಿದ್ದಾರೆ.

# ಮುಳ್ಳುಸೌತೆ ಪಾಯಸ



**ಬೇಕಾಗುವ ಸಾಮಾಗ್ರಿಗಳು :**

ಮುಳ್ಳು ಸೌತೆ – 1 ಕಪ್
ಬೇಯಿಸಿದ ಹೆಸರು ಬೇಳೆ – 1 1/2ಕಪ್
ಬೆಲ್ಲ – 1 1/2ಕಪ್
ಉಪ್ಪು – ಒಂದು ಚಿಟಿಕೆ
ದಪ್ಪ ತೆಂಗಿನ ಕಾಯಿ ಹಾಲು – 1 ಕಪ್
ತೆಂಗಿನ ಕಾಯಿ ತೆಳು ಹಾಲು – 2 ಕಪ್
ಏಲಕ್ಕಿ ಪುಡಿ – 1/2 ಚಮಚ
ಗೋಡಂಬಿ – 10–15

**ಮಾಡುವ ವಿಧಾನ :**

ಮೊದಲು ತುರಿದ ಮುಳ್ಳುಸೌತೆಕಾಯಿಯನ್ನು ಒಂದು ಪಾತ್ರೆಗೆ ಹಾಕಿ. ಅದಕ್ಕೆ 2 ಕಪ್ ತೆಂಗಿನ ಕಾಯಿಯ ತೆಳುಹಾಲನ್ನು ಹಾಕಿ 5 ನಿಮಿಷ ಕುದಿಸಬೇಕು. ನಂತರ ಬೇಯಿಸಿದ ಹೆಸರು ಬೇಳೆಯನ್ನು ಹಾಗೂ ಬೆಲ್ಲವನ್ನು ಹಾಕಿ, ಜೊತೆಗೆ ಒಂದು ಚಿಟಿಕಿ ಉಪ್ಪು ಸೇರಿಸಿ ಚೆನ್ನಾಗಿ ಕಲಸಿ ಮತ್ತೆ 5 ನಿಮಿಷಗಳ ಕಾಲ ಕುದಿಸಬೇಕು. ನಂತರ ದಪ್ಪ ತೆಂಗಿನ ಕಾಯಿ ಹಾಲು, ಏಲಕ್ಕಿ ಪುಡಿ ಹಾಗೂ ತುಪ್ಪದಲ್ಲಿ ಹುರಿದ ಗೋಡಂಬಿ ಹಾಕಿ ಒಮ್ಮೆ ಚೆನ್ನಾಗಿ ಕಲಸಿಮತ್ತೆ ಎರಡು ನಿಮಿಷ ಕುದಿಸಿದರೆ ರುಚಿಯಾದ ಮತ್ತು ದೇಹಕ್ಕೆ ತಂಪು ನೀಡುವ ಮುಳ್ಳುಸೌತೆ ಪಾಯಸ ಸವಿಯಲು ಸಿದ್ಧ.

# ಯೆಮೆನ್ ಮೇಲೆ ಸೌದಿ ಅರೇಬಿಯಾ ವೈಮಾನಿಕ ದಾಳಿ



ಮುಕಲ್ಲಾ: ಯೆಮೆನ್‌ನ ದಕ್ಷಿಣ ಬಂದರು ನಗರ ಮುಕಲ್ಲಾದಲ್ಲಿ ಸೌದಿ ಅರೇಬಿಯಾ ನಡೆಸಿದ ವೈಮಾನಿಕ ದಾಳಿಯು, ಯೆಮೆನ್ ಸಂಘರ್ಷದಲ್ಲಿ ಪಾಲುದಾರರಾಗಿದ್ದ ಗಲ್ಫ್ ರಾಷ್ಟ್ರಗಳ ನಡುವಿನ ಬಿರುಕುಗಳನ್ನು ಬಹಿರಂಗಪಡಿಸಿದೆ. ದಕ್ಷಿಣ ಯೆಮೆನ್‌ನ ಪ್ರತ್ಯೇಕತಾವಾದಿ ಪಡೆಗಳಿಗೆ ಶಸ್ತ್ರಾಸ್ತ್ರ ಸಾಗಣೆ ನಡೆದಿದೆ ಎಂಬ ಆರೋಪದ ಹಿನ್ನೆಲೆಯಲ್ಲಿ ಈ ದಾಳಿ ನಡೆಸಲಾಗಿದೆ ಎಂದು ಸೌದಿ ನೇತೃತ್ವದ ಒಕ್ಕೂಟ ತಿಳಿಸಿದೆ. ಯೆಮೆನ್ ರಾಷ್ಟ್ರೀಯ ಮಾಧ್ಯಮಗಳು ಬಂದರು ಪ್ರದೇಶದಲ್ಲಿ ಹೊಗೆ ಬರುತ್ತಿರುವ ದೃಶ್ಯಗಳನ್ನು ಪ್ರಸಾರ ಮಾಡಿವೆ. ಮನೆಗಳಿಗೆ ಹಾನಿಯಾಗಿದೆ ಎಂಬ ವರದಿಗಳಿದ್ದರೂ, ಯಾವುದೇ ಸಾವು ಸಂಭವಿಸಿಲ್ಲ ಎಂದು ಸೌದಿ ಮಾಧ್ಯಮಗಳು ತಿಳಿಸಿವೆ.

# ಖಮೇನಿ ಆಡಳಿತದ ವಿರುದ್ಧ ಇರಾನ್‌ನಲ್ಲಿ ಪ್ರತಿಭಟನೆ



ಇರಾನ್: ಅಯತೊಲ್ಲಾ ಅಲಿ ಖಮೇನಿ ನೇತೃತ್ವದ ಆಡಳಿತದ ವಿರುದ್ಧ ಇರಾನ್‌ನಲ್ಲಿ ಪ್ರತಿಭಟನೆಗಳು ಭುಗಿಲೆದ್ದಿವೆ. "ಮುಲ್ಲಾಗಳು ದೇಶದಿಂದ ಹೊರಹೋಗಬೇಕು" ಮತ್ತು "ಸರ್ವಾಧಿಕಾರಿಗೆ ಸಾವು" ಎಂಬ ಘೋಷಣೆಗಳು ಇರಾನಿನ ಪ್ರಮುಖ ನಗರಗಳಲ್ಲಿ ಪ್ರತಿಧ್ವನಿಸಿವೆ. ಕುಸಿಯುತ್ತಿರುವ ರಿಯಾಲ್, ದಾಖಲೆಯ ಹಣದುಬ್ಬರ ಮತ್ತು ವರ್ಷಗಳ ನಿರ್ಬಂಧಗಳಿಂದ ಕೋಪ ಮತ್ತು ಪ್ರಕ್ಷುಬ್ಧತೆ ಈ ಪ್ರತಿಭಟನೆಗೆ ಕಾರಣವಾಗಿದೆ. ಇರಾನಿನ ರಿಯಾಲ್ ಅಮೆರಿಕನ್ ಡಾಲರ್ ವಿರುದ್ಧ 42,000ಕ್ಕಿಂತ ಕುಸಿದಿದ್ದು, ಹಣದುಬ್ಬರವು 42%ಕ್ಕಿಂತ ಹೆಚ್ಚಿರುವುದರಿಂದ, ಅಯತೊಲ್ಲಾ ಅಲಿ ಖಮೇನಿ ಅವರ ಆಡಳಿತವು ಮೂರು ವರ್ಷಗಳಲ್ಲಿ ಅತಿದೊಡ್ಡ ಪ್ರತಿಭಟನೆಯನ್ನು ನೋಡುವಂತಾಗಿದೆ.

# ಶಂಕಿತ ಆರೋಪಿ ದುಬೈನಿಂದ ವಿಡಿಯೋ ಬಿಡುಗಡೆ



ದುಬೈ: ಬಾಂಗ್ಲಾದೇಶದ ವಿದ್ಯಾರ್ಥಿ ದಂಗೆಯ ನಾಯಕ ಒಸ್ಮಾನ್ ಹಾದಿ ಹತ್ಯೆಯ ಪ್ರಮುಖ ಶಂಕಿತ ಆರೋಪಿ ಎಂದು ಹೇಳಲಾಗುತ್ತಿರುವ ಫೈಸಲ್ ಕರೀಮ್ ಮಸೂದ್ ದುಬೈನಲ್ಲಿ ಪ್ರತ್ಯಕ್ಷನಾಗಿದ್ದು, ತನ್ನ ವಿರುದ್ಧ ಕೇಳಿ ಬಂದಿರುವ ಆರೋಪ ಸಂಬಂಧ ವಿಡಿಯೋ ಬಿಡುಗಡೆ ಮಾಡಿ ಸ್ಪಷ್ಟನೆ ನೀಡಿದ್ದಾನೆ. ವಿದೇಶದಿಂದ ವಿಡಿಯೋ ಸಂದೇಶವನ್ನು ಬಿಡುಗಡೆ ಮಾಡಿರುವ ಆರೋಪಿ, ತಾನು ದುಬೈನಲ್ಲಿರುವುದಾಗಿ ಹೇಳಿದ್ದಾನೆ. ಅಲ್ಲದೆ, ಹತ್ಯೆ ಪ್ರಕರಣದಲ್ಲಿ ಯಾವುದೇ ರೀತಿಯಲ್ಲಿ ನಾನು ಭಾಗಿಯಾಗಿಲ್ಲ ಎಂದು ಹೇಳಿದ್ದಾರೆ. ನಾನು ಪ್ರಸ್ತುತ ದುಬೈನಲ್ಲಿದ್ದೇನೆ. ಈ ಹತ್ಯೆಗೂ ನನಗೂ ಯಾವುದೇ ಸಂಬಂಧವಿಲ್ಲ ಎಂದು ಹೇಳಿದ್ದಾನೆ.

# ತನ್ನ ಸೋದರನ ಪುತ್ರನ ಜತೆ ಆಸಿಮ್ ಮುನೀರ್ ಪುತ್ರಿ ಮದುವೆ



ಇಸ್ಲಾಮಾಬಾದ್: ಪಾಕಿಸ್ತಾನದ ಸೇನಾ ಮುಖ್ಯಸ್ಥ ಆಸಿಮ್ ಮುನೀರ್ ತಮ್ಮ ಪುತ್ರಿ ಮಹ್ನೂರ್ ಅವರನ್ನು ಸೋದರನ ಪುತ್ರನಿಗೆ ನೀಡಿ ವಿವಾಹ ಮಾಡಿರುವ ಬಗ್ಗೆ ವರದಿಯಾಗಿದೆ. ಸೋದರ ಕಾಸಿಮ್ ಮುನೀರ್ ಪುತ್ರ ಅಬ್ದುಲ್ ರೆಹಮಾನ್ ಜತೆ ಪುತ್ರಿ ಮಹ್ನೂರ್ ವಿವಾಹ ಮಾಡಿಸಿದ್ದಾರೆ. ಈ ಮೂಲಕ ಸೋದರನ ಮಗನನ್ನು ಮುನೀರ್ ಅಳಿಯನನ್ನಾಗಿ ಮಾಡಿಕೊಂಡಿದ್ದಾರೆ. ವಿವಾಹವು ರಾವಲ್ಪಿಂಡಿಯ ಪಾಕಿಸ್ತಾನ ಸೇನೆಯ ಪ್ರಧಾನ ಕಚೇರಿಯಲ್ಲಿ ಡಿ.26ರಂದು ಅದ್ದೂರಿಯಾಗಿ ನೆರವೇರಿದೆ. ಹೀಗಿದ್ದೂ ವಿವಾಹ ಸಮಾರಂಭದ ಯಾವುದೇ ಫೋಟೋಗಳು ಸಾರ್ವಜನಿಕವಾಗಿ ಬಿಡುಗಡೆ ಮಾಡಿಲ್ಲ.

# ಬಾಂಗ್ಲಾದೇಶದಲ್ಲಿ ಮತ್ತೊಬ್ಬ ಹಿಂದೂ ವ್ಯಕ್ತಿಯ ಹತ್ಯೆ



ಢಾಕಾ: ಭಾರತದ ನೆರೆಯ ದೇಶ ಬಾಂಗ್ಲಾದೇಶದಲ್ಲಿ ಅಲ್ಪಸಂಖ್ಯಾತರ ಮೇಲಿನ ದೌರ್ಜನ್ಯ ಪ್ರಕರಣಗಳು ಹೆಚ್ಚಾಗುತ್ತಿರುವ ಬೆನ್ನಲ್ಲೇ, ಸಹದ್ಯೋಗಿಯೊಬ್ಬರೇ ಹಿಂದೂ ವ್ಯಕ್ತಿಯೊಬ್ಬರನ್ನು ಗುಂಡಿಕ್ಕಿ ಹತ್ಯೆ ಮಾಡಿರುವ ಘಟನೆ ಜರುಗಿದೆ. ಮೈಮೆನ್‌ಶಿಂಘೋದಲ್ಲಿ ಭಜೇಂದ್ರ ಬಿಸ್ವಾಸ್(40) ಎನ್ನುವವರನ್ನು ಸಹದ್ಯೋಗಿಯೊಬ್ಬರೇ ಗುಂಡಿಕ್ಕಿ ಕೊಲೆ ಮಾಡಿದ್ದಾರೆ. ಇದೇ ಪ್ರದೇಶದ ಕಾರ್ಖಾನೆಯೊಂದರಲ್ಲಿ ಕೆಲಸ ಮಾಡುತ್ತಿದ್ದ ದೀಪು ಚಂದ್ರದಾಸ್ ಎನ್ನುವವರನ್ನು ಇತ್ತೀಚೆಗೆ ಬೆಂಕಿ ಹಚ್ಚಿ ಕೊಲೆ ಮಾಡಲಾಗಿತ್ತು. ಆರೋಪಿಯನ್ನು ನೋಮನ್ ಮಿಯಾ ಎಂದು ಗುರುತಿಸಲಾಗಿದ್ದು, ಅವರನ್ನು ಬಂಧಿಸಲಾಗಿದೆ ಎಂದು ಪೊಲೀಸರು ಮಾಹಿತಿ ನೀಡಿದ್ದಾರೆ.

# ಎಸ್.ಡಿ.ಎಂ. ವಿದ್ಯಾರ್ಥಿನಿ ರಾಜ್ಯ ಮಟ್ಟದದಲ್ಲಿ ಪ್ರಥಮ



ಉಜಿರೆ: ಇತ್ತೀಚೆಗೆ ಮೈಸೂರಿನ ಚಾಮುಂಡಿ ವಿಹಾರ ಸ್ಟೇಡಿಯಂನಲ್ಲಿ ಆಯೋಜಿಸಲಾದ ರಾಜ್ಯ ಮಟ್ಟದ ಕಿಡ್ಸ್ ಅಥ್ಲೆಟಿಕ್ಸ್ ಚಾಂಪಿಯನ್ ಶಿಪ್ ನಲ್ಲಿ ಉಜಿರೆಯ ಎಸ್.ಡಿ.ಎಂ ಆಂಗ್ಲ ಮಾಧ್ಯಮ ರಾಜ್ಯ ಪಠ್ಯಕ್ರಮ ಶಾಲೆಯ ವಿದ್ಯಾರ್ಥಿನಿ ಅನೀಶ ಆರೋಲ್ ಡಿಸೋಜಾ ಗುಂಡೆಸೆತ ಸ್ಪರ್ಧೆಯಲ್ಲಿ ಭಾಗವಹಿಸಿ ಪ್ರಥಮ ಸ್ಥಾನ ಪಡೆದಿದ್ದಾರೆ. ಈ ಮೂಲಕ ಜನವರಿ 11 ಮತ್ತು 12ರಂದು ತುಮಕೂರಿನಲ್ಲಿ ನಡೆಯಲಿರುವ ರಾಜ್ಯ ಮಟ್ಟದ ಮಿನಿ ಒಲಿಂಪಿಕ್ಸ್ ಅಥ್ಲೆಟಿಕ್ಸ್ ಕ್ರೀಡಾ ಕೂಟಕ್ಕೆ ಆಯ್ಕೆಯಾಗಿದ್ದಾರೆ.

# ರಾಷ್ಟ್ರೀಯ ಬಾಲ್ ಬ್ಯಾಡ್ಮಿಂಟನ್‌ಗೆ ಆಳ್ವಾಸ್‌ನ ಕ್ರೀಡಾಪಟುಗಳ ಆಯ್ಕೆ



ಮೂಡುಬಿದಿರೆ: ಆಳ್ವಾಸ್ ಶಿಕ್ಷಣ ಪ್ರತಿಷ್ಠಾನದ ನಾಲ್ವರು ಕ್ರೀಡಾಪಟುಗಳು ಅಂತಾರಾಷ್ಟ್ರೀಯ ಮಟ್ಟದ ಬಾಲ್‌ಬ್ಯಾಡ್ಮಿಂಟನ್ ಸ್ಪರ್ಧೆಗೆ ಆಯ್ಕೆಯಾಗುವ ಮೂಲಕ ಗಮನಾರ್ಹ ಸಾಧನೆ ಮೆರೆದಿದ್ದಾರೆ. ಬಿಹಾರದ ಪಾಟ್ನಾದಲ್ಲಿ ನಡೆದ ದಕ್ಷಿಣ ಏಷ್ಯಾ ಬಾಲ್ ಬ್ಯಾಡ್ಮಿಂಟನ್ ಚಾಂಪಿಯನ್‌ಶಿಪ್‌ನಲ್ಲಿ ಆಳ್ವಾಸ್ ಶಿಕ್ಷಣ ಪ್ರತಿಷ್ಠಾನದ ಜಯಲಕ್ಷ್ಮಿ ಭಾರತ ಮಹಿಳಾ ತಂಡದ ನಾಯಕಿಯಾಗಿ ಸ್ಪರ್ಧೆಯಲ್ಲಿ ಪಾಲ್ಗೊಂಡು, ತಂಡವನ್ನು ಜಯಭೇರಿ ಮೊಳಗಿಸುವಲ್ಲಿ ಯಶಸ್ವಿಯಾದರು. ಅತಿಥೇಯ ಭಾರತವಲ್ಲದೆ ನೇಪಾಳ, ಶ್ರೀಲಂಕಾ ಹಾಗೂ ಭೂತಾನ್ ತಂಡಗಳು ಈ ಪಂದ್ಯಾಟದಲ್ಲಿ ಪಾಲ್ಗೊಂಡಿದ್ದವು.

# ಎರಡೇ ದಿನದಲ್ಲಿ ಮುಗಿದ ಬಾಕ್ಸಿಂಗ್ ಡೇ ಟೆಸ್ಟ್!



ಹೈದರಬಾದ್ : ಇಗ್ಲೆಂಡ್ ಕ್ರಿಕೆಟ್ ತಂಡ ಆಸ್ಟ್ರೇಲಿಯಾ ಮಣ್ಣಿನಲ್ಲಿ 14 ವರ್ಷಗಳ ನಂತರ ಟೆಸ್ಟ್ ಪಂದ್ಯವನ್ನು ಗೆದ್ದು ಇತಿಹಾಸ ಸೃಷ್ಟಿಸಿದೆ. ಮೆಲ್ಬೋರ್ನ್ ಕ್ರಿಕೆಟ್ ಗ್ರೌಂಡ್‌ನಲ್ಲಿ (MSG) ನಡೆದ ಆಯಷಸ್ ಸರಣಿಯ ನಾಲ್ಕನೇ ಟೆಸ್ಟ್ ಪಂದ್ಯದಲ್ಲಿ ಇಂಗ್ಲೆಂಡ್ 4 ವಿಕೆಟ್‌ಗಳಿಂದ ಆಸ್ಟ್ರೇಲಿಯಾವನ್ನು ಸೋಲಿಸಿತು. ಈ ಬಾಕ್ಸಿಂಗ್ ಡೇ ಟೆಸ್ಟ್ ಕೇವಲ ಎರಡು ದಿನಗಳಲ್ಲಿ ಮುಗಿದಿದ್ದು, ಒಟ್ಟು 36 ವಿಕೆಟ್‌ಗಳು ಬಿದ್ದಿವೆ.

# ಬಜೆಟ್‌ಗೂ ಮೊದಲೇ ನಾಯಕತ್ವ ಬದಲಾವಣೆಯಾಗಬೇಕು : ಪರಮೇಶ್ವರ



ಬೆಂಗಳೂರು: ನಾಯಕತ್ವದ ವಿಷಯದಲ್ಲಿ ಕಾಂಗ್ರೆಸ್ ಹೈಕಮಾಂಡ್ ಏನನ್ನಾದರೂ ನಿರ್ಧರಿಸಬೇಕಾದರೆ, ಬಜೆಟ್ ಸಿದ್ಧತೆಗೂ ಮೊದಲೇ ಅದನ್ನು ಮಾಡಬೇಕು ಎಂದು ಗೃಹ ಸಚಿವ ಜಿ ಪರಮೇಶ್ವರ ಹೇಳಿದ್ದಾರೆ. ರಾಜ್ಯದಲ್ಲಿ ನಾಯಕತ್ವವನ್ನು ಬದಲಾಯಿಸಬೇಕೆ ಅಥವಾ ಬೇಡವೇ ಎಂಬುದನ್ನು ಕಾಂಗ್ರೆಸ್ ಹೈಕಮಾಂಡ್ ನಿರ್ಧರಿಸುತ್ತದೆ ಎಂದು ಅವರು ಹೇಳಿದರು. ಬಜೆಟ್ ಸಿದ್ಧತೆ ಫೆಬ್ರುವರಿಯಲ್ಲಿ ಆರಂಭವಾಗಲಿದೆ. ಅದಕ್ಕಿನ್ನು ಸುಮಾರು ಒಂದು ತಿಂಗಳು ಬಾಕಿ ಇದೆ. ನಾಯಕತ್ವ ಬದಲಾವಣೆ ಬಗ್ಗೆ ಹೈಕಮಾಂಡ್ ಏನನ್ನಾದರೂ ನಿರ್ಧರಿಸಬೇಕಾದರೆ, ಮೊದಲೇ ನಿರ್ಧರಿಸಬೇಕು' ಎಂದು ಉತ್ತರಿಸಿದ್ದಾರೆ.

# ಕಾಂಗ್ರೆಸ್ ನಾಯಕರು ವ್ಯರ್ಥ ಪ್ರಯತ್ನ ಮಾಡುತ್ತಿದ್ದಾರೆ –ಎಚ್.ಡಿ.ಡಿ



ಬೆಂಗಳೂರು: ಕಾಂಗ್ರೆಸ್ ನಾಯಕರು ತಮ್ಮ ಪಕ್ಷದ ವರ್ಚಸ್ಸಿಗೆ ಧಕ್ಕೆ ತರುವ ಮೂಲಕ ತಮ್ಮ ಪಕ್ಷವನ್ನು ರಾಜಕೀಯವಾಗಿ ಮುಳುಗಿಸಲು ವ್ಯರ್ಥ ಪ್ರಯತ್ನ ಮಾಡುತ್ತಿದ್ದಾರೆ ಎಂದು ಜೆಡಿಎಸ್ ವರಿಷ್ಠ ಎಚ್.ಡಿ. ದೇವೇಗೌಡ ಆರೋಪಿಸಿದ್ದಾರೆ. ನಮಗೆ ಶಕ್ತಿ ಇಲ್ಲ. ನಾವು ಎನ್‌ಡಿಎ ಜತೆ ಹೋಗಿದ್ದೀವಿ. ನೀವು ಎಕೆ ಸ್ಟಾಲಿನ್ ಮನೆ ಬಾಗಿಲಿಗೆ ಹೋಗ್ತಿರಾ ಎಂದು ಲೇವಡಿ ಮಾಡಿದರು. ರಾಜ್ಯದಲ್ಲಿ ಪ್ರಾದೇಶಿಕ ಪಕ್ಷ ಮತ್ತು ಅದರ ಕಾರ್ಯಕರ್ತರನ್ನು ಉಳಿಸಲು ಮಾತ್ರ ನಾವು ಬಿಜೆಪಿಯೊಂದಿಗೆ ಮೈತ್ರಿ ಮಾಡಿಕೊಂಡಿದ್ದೇವೆ, ಕಾಂಗ್ರೆಸ್ ನಾಯಕರು ಜೆಡಿಎಸ್‌ನ ವರ್ಚಸ್ಸಿಗೆ ಧಕ್ಕೆ ತರುವಲ್ಲಿ ವಿಫಲರಾಗಿದ್ದಾರೆ ಎಂದರು.

# ಬಬಲೇಶ್ವರದಲ್ಲಿ ಅದೃಶ್ಯ ಕಾಡಸಿದ್ದೇಶ್ವರ ಸ್ವಾಮೀಜಿ ಬಲ ಪ್ರದರ್ಶನ



ಬಬಲೇಶ್ವರ : ವಿಜಯಪುರ ಜಿಲ್ಲಾ ಪ್ರವೇಶ ನಿರ್ಬಂಧ ತೆರವಾದ ಎರಡು ವಾರಗಳ ಬಳಿಕ ಕೊಲ್ಹಾಪುರದ ಕನೇರಿ ಕಾಡಸಿದ್ಧೇಶ್ವರ ಮಠದ ಅದೃಶ್ಯ ಕಾಡಸಿದ್ಧೇಶ್ವರ ಸ್ವಾಮೀಜಿ ನೂರಾರು ಮಠಾಧೀಶರು, ಸಾವಿರಾರು ಭಕ್ತರೊಡಗೂಡಿ ಬಬಲೇಶ್ವರ ಪಟ್ಟಣದಲ್ಲಿ ಅದ್ದೂರಿ ಕಾರ್ಯಕ್ರಮ ಆಯೋಜಿಸುವ ಮೂಲಕ 'ಬಲ' ಪ್ರದರ್ಶನ ಮಾಡಿದರು. ಕನೇರಿ ಶ್ರೀಗೆ ಸ್ವಾಗತ ಕೋರುವ ಬ್ಯಾನರ್, ಕಟೌಟ್‌ಗಳು, ಸ್ವಾಗತ ಕಮಾನುಗಳು ಬಬಲೇಶ್ವರ ಪಟ್ಟಣದ ಪ್ರಮುಖ ಮಾರ್ಗಗಳಲ್ಲಿ ರಾರಾಜಿಸುತ್ತಿದ್ದವು. 'ಕರ್ನಾಟಕದ ಯೋಗಿ' ಎಂಬ ಘೋಷಣೆಗಳನ್ನು ಭಕ್ತರು ಮೊಳಗಿಸಿದರು. ಪುಷ್ಪವೃಷ್ಟಿಗೈಯುವ ಮೂಲಕ ಅದ್ದೂರಿಯಾಗಿ ಸ್ವಾಗತಿಸಿದರು.

# ಭೂಸ್ವಾಧೀನ ಪ್ರಕ್ರಿಯೆಗಳನ್ನು ಆದ್ಯತೆ ಮೇರೆಗೆ ಪೂರ್ಣಗೊಳಿಸಲು ತಾಕೀತು



ಬೆಂಗಳೂರು: ಕೇಂದ್ರ ಹಾಗೂ ರಾಜ್ಯ ಸರ್ಕಾರಗಳ ನಡುವೆ ಪರಸ್ಪರ 'ಸಹಕಾರ' ವಾರ್ ನಡೆಯುತ್ತಿದ್ದು, ಕರ್ನಾಟಕದಲ್ಲಿ ರೈಲ್ವೆ ಯೋಜನೆ ಅನುಷ್ಠಾನಕ್ಕೆ ಭೂಮಿ ಸಿಗುತ್ತಿಲ್ಲ, ಸರಿಯಾದ ಸ್ಪಂದನೆ ಸಿಗುತ್ತಿಲ್ಲ ಎಂಬುದಾಗಿ ರೈಲ್ವೆ ಸಚಿವ ಅಶ್ವಿನಿ ವೈಷ್ಣವ್ ಹಾಗೂ ವಿ.ಸೋಮಣ್ಣ ಹೇಳಿಕೆ ನೀಡಿರುವ ಬೆನ್ನಲ್ಲೇ, ಮುಖ್ಯಮಂತ್ರಿ ಸಿದ್ದರಾಮಯ್ಯ ರೈಲ್ವೆ ಯೋಜನೆಗಳ ತ್ವರಿತ ಪ್ರಕ್ರಿಯೆಯತ್ತ ಗಮನ ಹರಿಸಿದ್ದಾರೆ. ರೈಲ್ವೆ ಕಾಮಗಾರಿಗಳಿಗೆ ಬಾಕಿಯಿರುವ ಭೂಸ್ವಾಧೀನ ಪ್ರಕ್ರಿಯೆಗಳನ್ನು ಆದ್ಯತೆ ಮೇರೆಗೆ ಪೂರ್ಣಗೊಳಿಸಬೇಕೆಂದು ಅಧಿಕಾರಿಗಳಿಗೆ ತಾಕೀತು ಮಾಡಿದ್ದಾರೆ.

# ಕೋಗಿಲು ಪ್ರಕರಣ : ಸ್ಯಾಟಲೈಟ್ ಫೋಟೋ ಮೂಲಕ ತಿರುಗೇಟು!



ಬೆಂಗಳೂರು: ಯಲಹಂಕದ ಕೋಗಿಲು ಬಡಾವಣೆಯಲ್ಲಿ ಮನೆಗಳ ಧ್ವಂಸ ಪ್ರಕರಣಕ್ಕೆ ಸಂಬಂಧಿಸಿದಂತೆ ಕಳೆದ 25 ವರ್ಷಗಳಿಂದ ವಾಸವಿದ್ದೇವೆಂಬ ಸ್ಥಳೀಯರ ಆರೋಪಕ್ಕೆ ಗ್ರೇಟರ್ ಬೆಂಗಳೂರು ಪ್ರಾಧಿಕಾರ ಸ್ಯಾಟಲೈಟ್ ಫೋಟೋ ಬಿಡುಗಡೆ ಮಾಡುವ ಮೂಲಕ ತಿರುಗೇಟು ನೀಡಿದೆ. ಈ ಸ್ಯಾಟಲೈಟ್ ಫೋಟೋಗಳು 2016ರ ಮೊದಲು ಆ ಪ್ರದೇಶದಲ್ಲಿ ಯಾವುದೇ ಮನೆಗಳೂ ಇರಲಿಲ್ಲವೆಂಬುದನ್ನು ಸ್ಪಷ್ಟಪಡಿಸಿವೆ. ಏತನ್ಮಧ್ಯೆ ವಾಸಿಮ್ ಎಂಬ ವ್ಯಕ್ತಿ 1.5 ಲಕ್ಷದಿಂದ 2ಲಕ್ಷ ರೂ. ನೀಡಿ ಮನೆ ನಿರ್ಮಿಸಿಕೊಂಡಿರುವುದಾಗಿ ಹೇಳಿದ್ದು, ಈ ವಿಚಾರ ಉಪಮುಖ್ಯಮಂತ್ರಿ ಡಿಕೆ.ಶಿ. ಸ್ಥಳಕ್ಕೆ ಭೇಟಿ ನೀಡಿದಾಗ ಉಲ್ಬಣಗೊಂಡಿತ್ತು.

# ಸಚಿವ ಸಂಪುಟ ಪುನ : ರಚನೆಗೆ ಕಸರತ್ತು !



ಬೆಂಗಳೂರು – ನಾಯಕತ್ವ ಬದಲಾವಣೆಯ ಚರ್ಚೆಗಳು ಮುಗಿದ ಅಧ್ಯಾಯ ಎಂದು ಪ್ರತಿಪಾದಿಸುತ್ತಲೇ, ಮುಖ್ಯಮಂತ್ರಿ ಸಿದ್ದರಾಮಯ್ಯ ಸಚಿವ ಸಂಪುಟ ಪುನರ್ ರಚನೆಗೆ ಮತ್ತೊಂದು ಸುತ್ತಿನ ಕಸರತ್ತು ಆರಂಭಿಸಿದ್ದಾರೆ. ರಾಜ್ಯದಲ್ಲಿ ಸೃಷ್ಟಿಯಾಗಿರುವ ರಾಜಕೀಯ ಗೊಂದಲಗಳಿಗೆ ಹೈಕಮಾಂಡ್ ಮಧ್ಯ ಪ್ರವೇಶಿಸುವುದಿಲ್ಲ ಎಂದು ಅರಿವಾಗುತ್ತಿದ್ದಂತೆ, ಅಭಿಪ್ರಾಯ ತಮ್ಮ ಪರವಾಗಿದೆ ಎಂದು ಮನಗಂಡ ಮುಖ್ಯಮಂತ್ರಿ ಅವರು ಸಂಪುಟ ಪುನರ್ ರಚನೆಗೆ ಕೈ ಹಾಕುವ ಮೂಲಕ ನಾಯಕತ್ವವನ್ನು ಮತ್ತಷ್ಟು ಗಟ್ಟಿ ಮಾಡಿಕೊಳ್ಳಲು ಮುಂದಾಗಿದ್ದಾರೆ. ದೆಹಲಿಗೆ ತೆರಳಿರುವ ಸಿದ್ದರಾಮಯ್ಯ ರಾಷ್ಟ್ರೀಯ ಕಾರ್ಯಕಾರಿಣಿ ಸಭೆಯಲ್ಲಿ ಭಾಗವಹಿಸಿದ್ದಾರೆ.

# ಹಿಂದೂಗಳ ಹತ್ಯೆಯು ಕ್ರೌರ್ಯದ ಪರಮಾವದಿ– ಮೌಲಾನಾ ಮದನಿ



ನವದೆಹಲಿ: ಬಾಂಗ್ಲಾದೇಶದಲ್ಲಿ ಧರ್ಮನಿಂದನೆಯ ಆರೋಪದ ಮೇಲೆ ಹಿಂದೂ ವ್ಯಕ್ತಿಯ ಮೇಲೆ ಹಲ್ಲೆ ನಡೆಸಿ, ಹತ್ಯೆ ಮಾಡಿರುವುದನ್ನು ಜಮಿಯತ್ ಉಲಮಾ–ಎ–ಹಿಂದ್ ತೀವ್ರವಾಗಿ ಖಂಡಿಸಿದೆ. ಇದು 'ಕ್ರೌರ್ಯದ ಪರಮಾವಧಿ'ಯಾಗಿದ್ದು, ಅಪರಾಧಿಗಳಿಗೆ ಕಠಿಣ ಶಿಕ್ಷೆ ವಿಧಿಸಬೇಕೆಂದು ಒತ್ತಾಯಿಸಿದೆ. 'ನೆರೆಯ ದೇಶದಲ್ಲಿ ಅಲ್ಪಸಂಖ್ಯಾತ ಹಿಂದೂ ಸಮುದಾಯದವರ ವಿರುದ್ಧದ ದೌರ್ಜನ್ಯಗಳು ತುಂಬಾ ದುರದೃಷ್ಟಕರ. ಇಂತಹ ಘಟನೆಗಳು ಇಸ್ಲಾಂನ ಬೋಧನೆಗಳಿಗೆ ವಿರುದ್ಧವಾಗಿರುವುದಲ್ಲದೆ ಧರ್ಮಕ್ಕೂ ಅಪಮಾನವನ್ನುಂಟು ಮಾಡುತ್ತವೆ. ತಪ್ಪಿತಸ್ಥರಿಗೆ ಕಠಿಣ ಶಿಕ್ಷೆಯಾಗಬೇಕು' ಎಂದು ಜಮಿಯತ್ ಮುಖ್ಯಸ್ಥ ಒತ್ತಾಯಿಸಿದ್ದಾರೆ.

# ಕಾಂಗ್ರೆಸ್ ಶಾಸಕ ವೀರೇಂದ್ರ ಪಪ್ಪಿಗೆ ಜಾಮೀನು



ಬೆಂಗಳೂರು : ಅಕ್ರಮ ಹಣ ವರ್ಗಾವಣೆ ಮತ್ತು ಬೆಟ್ಟಿಂಗ್ ದಂಧೆ ಆರೋಪದಡಿ ಜಾರಿ ನಿರ್ದೇಶನಾಲಯದಿಂದ (ED) ಬಂಧಿಸಲ್ಪಟ್ಟಿದ್ದ ಚಿತ್ರದುರ್ಗ ಜಿಲ್ಲೆಯ ಚಳ್ಳಕೆರೆ ಕ್ಷೇತ್ರದ ಕಾಂಗ್ರೆಸ್ ಶಾಸಕ ಕೆ.ಸಿ. ವೀರೇಂದ್ರ ಪಪ್ಪಿ ಅವರಿಗೆ ಕೊನೆಗೂ ಜಾಮೀನು ದೊರೆತಿದೆ. ಕಳೆದ ನಾಲ್ಕು ತಿಂಗಳಿಂದ ನ್ಯಾಯಾಂಗ ಬಂಧನದಲ್ಲಿದ್ದ ಶಾಸಕರಿಗೆ ಬೆಂಗಳೂರಿನ ಜನಪ್ರತಿನಿಧಿಗಳ ವಿಶೇಷ ನ್ಯಾಯಾಲಯವು ಷರತ್ತುಬದ್ಧ ಜಾಮೀನು ಮಂಜೂರು ಮಾಡಿದೆ. ಆನ್‌ಲೈನ್ ಮತ್ತು ಆಫ್‌ಲೈನ್ ಬೆಟ್ಟಿಂಗ್ ಆಯಪ್‌ಗಳ ಮೂಲಕ ಸು. 2,000 ಕೋಟಿ ರೂಪಾಯಿಗೂ ಅಧಿಕ ಹಣದ ಅಕ್ರಮ ವರ್ಗಾವಣೆ ನಡೆದಿದೆ ಎಂಬ ಆರೋಪ ಇವರ ಮೇಲಿತ್ತು.

# ಉನ್ನಾವೋ ಅತ್ಯಾಚಾರ : ಸುಪ್ರೀಂ ಕೋರ್ಟ್ ತಡೆ



ನವದೆಹಲಿ: ಉನ್ನಾವೋ ಅತ್ಯಾಚಾರ ಪ್ರಕರಣದಲ್ಲಿ ಬಿಜೆಪಿಯ ಮಾಜಿ ಶಾಸಕ ಕುಲದೀಪ್ ಸಿಂಗ್ ಸೆಂಗಾರ್ ಅವರ ಜೀವಾವಧಿ ಶಿಕ್ಷೆಯನ್ನು ಅಮಾನತುಗೊಳಿಸಿ ಜಾಮೀನು ನೀಡಿದ ದೆಹಲಿ ಹೈಕೋರ್ಟ್ ಆದೇಶಕ್ಕೆ ಸುಪ್ರೀಂ ಕೋರ್ಟ್ ಸೋಮವಾರ ತಡೆ ನೀಡಿದೆ. ಡಿಸೆಂಬರ್ 23, 2025 ರ ದೆಹಲಿ ಹೈಕೋರ್ಟ್ ಆದೇಶಕ್ಕೆ ನಾವು ತಡೆಯಾಜ್ಞೆ ನೀಡುತ್ತೇವೆ ಮತ್ತು ಆದ್ದರಿಂದ ಪ್ರತಿವಾದಿಯನ್ನು ಈ ಆದೇಶದ ಪ್ರಕಾರ ಬಿಡುಗಡೆ ಮಾಡಲಾಗುವುದಿಲ್ಲ ಎಂದು ಸಿಜೆಐ ಸೂರ್ಯಕಾಂತ್ ಹೇಳಿದರು.

# ಜಮ್ಮು ಮತ್ತು ಕಾಶ್ಮೀರದಲ್ಲಿ ವಿದ್ಯಾರ್ಥಿಗಳ ಪ್ರತಿಭಟನೆ!



ದೆಹಲಿ : ಜಮ್ಮು ಮತ್ತು ಕಾಶ್ಮೀರದ ರಾಜಕೀಯ ವಲಯದಲ್ಲಿ ಮತ್ತೆ ಸಂಚಲನ ಸೃಷ್ಟಿಯಾಗಿದ್ದು, ಪಿಡಿಪಿ ಅಧ್ಯಕ್ಷೆ ಹಾಗೂ ಮಾಜಿ ಮುಖ್ಯಮಂತ್ರಿ ಮೆಹಬೂಬಾ ಮುಫ್ತಿ ಅವರನ್ನು ಗೃಹಬಂಧನದಲ್ಲಿರಿಸಲಾಗಿದೆ. ರಾಜ್ಯದ ಹಾಲಿ ಮೀಸಲಾತಿ ನೀತಿಯನ್ನು ವಿರೋಧಿಸಿ ನಡೆಯುತ್ತಿರುವ ವಿದ್ಯಾರ್ಥಿಗಳ ಪ್ರತಿಭಟನೆಗೆ ಬೆಂಬಲ ಘೋಷಿಸಿದ ಬೆನ್ನಲ್ಲೇ ಈ ಕ್ರಮ ಕೈಗೊಳ್ಳಲಾಗಿದೆ. ಜಮ್ಮು ಮತ್ತು ಕಾಶ್ಮೀರದಲ್ಲಿ ಜಾರಿಯಲ್ಲಿರುವ ಹಾಲಿ ಮೀಸಲಾತಿ ನೀತಿಯ ವಿರುದ್ಧ ವಿದ್ಯಾರ್ಥಿಗಳು ಇಂದು ಬೃಹತ್ ಪ್ರತಿಭಟನೆ ಆಯೋಜಿಸಿದ್ದರು. ಈ ಪ್ರತಿಭಟನೆಯಲ್ಲಿ ತಾವೂ ಭಾಗವಹಿಸುವುದಾಗಿ ಮೆಹಬೂಬಾ ಮುಫ್ತಿ ಘೋಷಿಸಿದ್ದರು.

# ಸುಂಕ ಇಳಿಸಲು ಭಾರತದ ಅಂತಿಮ ಪ್ರಸ್ತಾವನೆ !



ನವದೆಹಲಿ : ಭಾರತವು ತನ್ನ ವ್ಯಾಪಾರದ ಅಂತಿಮ ಪ್ರಸ್ತಾವನೆಯನ್ನು ಅಮೆರಿಕಕ್ಕೆ ಮಂಡಿಸಿದೆ. ಭಾರತದ ಮೇಲೆ ವಿಧಿಸಲಾದ ಒಟ್ಟು 50% ಸುಂಕವನ್ನು 15% ಕ್ಕೆ ಇಳಿಸಬೇಕು ಮತ್ತು ರಷ್ಯಾದ ಕಚ್ಚಾ ತೈಲ ಖರೀದಿಯ ಮೇಲೆ ವಿಧಿಸಲಾದ ಹೆಚ್ಚುವರಿ 25% ದಂಡವನ್ನು ಸಂಪೂರ್ಣವಾಗಿ ತೆಗೆದುಹಾಕಬೇಕೆಂದು ಭಾರತ ಸ್ಪಷ್ಟವಾಗಿ ಅಮೆರಿಕಕ್ಕೆ ತಿಳಿಸಿದೆ. ಎರಡೂ ದೇಶಗಳ ನಡುವೆ ನಡೆಯುತ್ತಿರುವ ಮಾತುಕತೆಗಳು ಹೊಸ ವರ್ಷದಲ್ಲಿ ಒಂದು ನಿರ್ದಿಷ್ಟ ನಿರ್ಧಾರವನ್ನು ನೀಡುವ ನಿರೀಕ್ಷೆಯಿದೆ. ಸಮಗ್ರ ದ್ವಿಪಕ್ಷೀಯ ವ್ಯಾಪಾರ ಒಪ್ಪಂದ (ಬಿಟಿಎ) ಕುರಿತು ಎರಡೂ ದೇಶಗಳ ನಡುವೆ ಮಾತುಕತೆ ನಡೆಯುತ್ತಿದೆ.

# ವಲಸಿಗರು ಹೆಚ್ಚಾದರೂ ಅಸ್ಸಾಂ ಬಾಂಗ್ಲಾದ ಪಾಲಾಗಲಿದೆ : ಅಸ್ಸಾಂ ಸಿಎಂ



ಘುವಾ: ದೇಶದೆಲ್ಲೆಡೆ ಅಕ್ರಮ ಬಾಂಗ್ಲಾ ವಲಸಿಗರ ಸಂಖ್ಯೆ ತೀವ್ರವಾಗಿ ಹೆಚ್ಚಾಗಿರುವುದು ದೇಶಕ್ಕೆ ಕಂಟಕ ತಂದೊಡ್ಡುತ್ತಿದೆ. ಮುಂಬೈ ಮಹಾನಗರಿಯೊಂದರಲ್ಲೇ ಶೇಕಡಾ 70ರಷ್ಟು ಬಾಂಗ್ಲಾ ಅಕ್ರಮ ವಲಸಿಗರು ಭಾರತೀಯ ವೋಟರ್ ಕಾರ್ಡ್ ಹೊಂದಿದ್ದಾರೆ ಎಂಬ ವಿಚಾರವೊಂದು ಸಮೀಕ್ಷೆಯಿಂದ ಬೆಳಕಿಗೆ ಬಂದಿದೆ. ಹೀಗಿರುವಾಗ ಅಕ್ರಮ ವಲಸಿಗರು ತೀವ್ರವಾಗಿ ಹೆಚ್ಚಿರುವ ಅಸ್ಸಾಂನಲ್ಲಿ ಇನ್ನೂ ಶೇಕಡಾ 10ರಷ್ಟು ಬಾಂಗ್ಲಾ ಅಕ್ರಮ ವಲಸಿಗರು ಹೆಚ್ಚಾದರೂ ಅಸ್ಸಾಂ ಬಾಂಗ್ಲಾದ ಪಾಲಾಗಲಿದೆ ಎಂದು ಅಸ್ಸಾಂ ಸಿಎಂ ಹಿಮಂತ್ ಬಿಸ್ವಾ ಸರ್ಮಾ ಹೇಳಿದ್ದಾರೆ.

ಕರಾವಳಿ ತರಂಗಿಣಿ

# ಕಲಾ ತರಂಗಿಣಿ

## ಸುರಾಮ್ ಮೂವೀಸ್ ನಿರ್ಮಾಣದ ನಾಲ್ಕನೇ ಚಿತ್ರ 'LSD'

ಸುರಾಮ್ ಮೂವೀಸ್ ಲಾಂಛನದಲ್ಲಿ ಜಯರಾಮ್ ದೇವಸಮುದ್ರ ನಿರ್ಮಿಸುತ್ತಿರುವ ಹಾಗೂ ಶಕ್ತಿಪ್ರಸಾದ್ ನಿರ್ದೇಶನದಲ್ಲಿ ಚೈತ್ರಾ ಜೆ ಆಚಾರ್ ಪ್ರಮುಖ ಪಾತ್ರದಲ್ಲಿ ನಟಿಸುತ್ತಿರುವ 'LSD' (ಲೈಲಾಸ್ ಸ್ವೀಟ್ ಡ್ರೀಮ್) ಚಿತ್ರದ ಟೈಟಲ್ ಟೀಸರ್ ಇತ್ತೀಚೆಗೆ ಬಿಡುಗಡೆಯಾಗಿದೆ. ಟೈಟಲ್ ಟೀಸರ್ ಬಹಳ ಕುತೂಹಲ ಮೂಡಿಸಿದೆ. ಟೀಸರ್ ಬಿಡುಗಡೆ ನಂತರ ಚಿತ್ರತಂಡದ ಸದಸ್ಯರು ಮಾತನಾಡಿದರು. 'LSD', ನಮ್ಮ ಸುರಾಮ್ ಮೂವೀಸ್ ನಿರ್ಮಾಣದ ನಾಲ್ಕನೇ ಚಿತ್ರ. 'ನಿದ್ರಾದೇವಿ ನೆಕ್ಸ್ಟ್ ಡೋರ್' ನಮ್ಮ ಸಂಸ್ಥೆಯ ಮೊದಲ ನಿರ್ಮಾಣದ ಚಿತ್ರ. ನಂತರ ಶ್ರೀಮುರಳಿ ಅಭಿನಯದ 'ಉಗ್ರಾಯಧಮ್' ಹಾಗೂ 'ನೀ ನಂಗೆ ಅಲ್ವಾ' ಚಿತ್ರಗಳ ಚಿತ್ರೀಕರಣ ನಡೆಯುತ್ತಿದೆ. ಹೊಸ ಪ್ರತಿಭೆಗಳಿಗೆ ಅವಕಾಶ ಮಾಡಿಕೊಡಬೇಕೆಂಬುದು ನಮ್ಮ ಸಂಸ್ಥೆಯ ಮುಖ್ಯ ಉದ್ದೇಶ. ಹಾಗಾಗಿ ಯುವ ಪ್ರತಿಭೆ ಶಕ್ತಿಪ್ರಸಾದ್ ಅವರು ಬಂದು 'LSD' ಚಿತ್ರದ ಕಥೆ ಹೇಳಿದಾಗ ಬಹಳ ಇಷ್ಟವಾಯಿತು. ನಿರ್ಮಾಣಕ್ಕೆ ಮುಂದಾದೆ. ಚೈತ್ರಾ ಜೆ ಆಚಾರ್, ಎಂ.ಡಿ.ಪಲ್ಲವಿ, ಅವಿನಾಶ್ ಮುಂತಾದವರು ಈ ಚಿತ್ರದ ಪ್ರಮುಖಪಾತ್ರದಲ್ಲಿ ನಟಿಸುತ್ತಿದ್ದಾರೆ. ನಮ್ಮ ಚಿತ್ರಕ್ಕೆ ನಿಮ್ಮೆಲ್ಲರ ಪ್ರೋತ್ಸಾಹವಿರಲಿ ಎಂದರು ನಿರ್ಮಾಪಕ ಜಯರಾಮ್ ದೇವಸಮುದ್ರ. ನಾನು ನನ್ನ ತಂಡದ ಜೊತೆಗೆ ಅನೇಕ ಕಿರುಚಿತ್ರಗಳನ್ನು ನಿರ್ಮಾಣ ಮಾಡಿದ್ದೇನೆ. ಬೆಳ್ಳಿತೆರೆಯಲ್ಲಿ ಇದು ನನ್ನ ಮೊದಲ ಚಿತ್ರ. ಅವಕಾಶ ಮಾಡಿಕೊಟ್ಟ ನಿರ್ಮಾಪಕರಿಗೆ ಧನ್ಯವಾದ. 'LSD' ಎಂದರೆ 'ಲೈಲಾಸ್ ಸ್ವೀಟ್ ಡ್ರೀಮ್' ಅಂತ. ಚೈತ್ರಾ ಜೆ. ಆಚಾರ್ ಪ್ರಮುಖ ಪಾತ್ರದಲ್ಲಿ ಅಭಿನಯಿಸುತ್ತಿದ್ದು ಅವರ ತಾಯಿ ಪಾತ್ರದಲ್ಲಿ ಎ.ಡಿ.ಪಲ್ಲ ವಿ ನಟಿಸುತ್ತಿದ್ದಾರೆ. ಬ್ಯುಸ್ ನೆಸ್‌ಮ್ಯಾನ್ ಪಾತ್ರದಲ್ಲಿ ಹಿರಿಯ ನಟ ಅವಿನಾಶ್ ಕಾಣಿಸಿಕೊಳ್ಳುತ್ತಿದ್ದಾರೆ. ಮಿಥುನ್ ಮುಕುಂದನ್ ಸಂಗೀತ ನಿರ್ದೇಶನ, ರಿತೇಶ್ ಛಾಯಾಗ್ರಹಣ ಹಾಗೂ ಬಲರಾಮ್ ಅವರ ಸಂಕಲನವಿರುವ ಈ ಚಿತ್ರಕ್ಕೆ ಒಂದು ಹಂತದ ಚಿತ್ರೀಕರಣ ಮುಕ್ತಾಯವಾಗಿದ್ದು, ಜ.15ರಿಂದ ಎರಡನೇ ಹಂತದ ಚಿತ್ರೀಕರಣ ಆರಂಭವಾಗಲಿದೆ.



## ಸಂಕ್ರಾಂತಿ ಹಬ್ಬಕ್ಕೆ 'ದಿ ರಾಜಾ ಸಾಬ್' ಅಬ್ಬರ

ಹೈದರಾಬಾದ್: ಪ್ಯಾನ್-ಇಂಡಿಯಾ ಸೂಪರ್ ಸ್ಟಾರ್ ಪ್ರಭಾಸ್ ನಟನೆಯ ಬಹುನಿರೀಕ್ಷಿತ ಚಿತ್ರ 'ದಿ ರಾಜಾ ಸಾಬ್' ತಂಡದಿಂದ ಸಂಕ್ರಾಂತಿ ಹಬ್ಬದ ಸಂಭ್ರಮಕ್ಕೆ ಮುನ್ನುಡಿ ಬರೆಯಲಾಗಿದೆ. ಹೈದರಾಬಾದ್‌ನಲ್ಲಿ ಅದ್ದೂರಿಯಾಗಿ ನಡೆದ ಪ್ರೀ-ರಿಲೀಸ್ ಸಮಾರಂಭದಲ್ಲಿ ಚಿತ್ರತಂಡವು ಅಭಿಮಾನಿಗಳ ಸಮ್ಮುಖದಲ್ಲಿ ಸಿನಿಮಾ ಬಗ್ಗೆ ಹಲವು ಸ್ವಾರಸ್ಯಕರ ವಿಚಾರಗಳನ್ನು ಹಂಚಿಕೊಂಡಿದೆ. ಕಾರ್ಯಕ್ರಮದ ಪ್ರಮುಖ ಆಕರ್ಷಣೆಯಾಗಿದ್ದ ರೆಬೆಲ್ ಸ್ಟಾರ್ ಪ್ರಭಾಸ್ ಮಾತನಾಡಿ, "ಅಭಿಮಾನಿಗಳಿಗೆ ಸಂಪೂರ್ಣ ಮನರಂಜನೆ ನೀಡುವ ಉದ್ದೇಶದಿಂದ ಈ ಸಿನಿಮಾ ಮಾಡಿದ್ದೇವೆ. ನಿರ್ದೇಶಕ ಮಾರುತಿ ಅವರ ಬರವಣಿಗೆಗೆ ನಾನು ಕ್ಲೈಮ್ಯಾಕ್ಸ್ ನೋಡಿದ ನಂತರ ಅಭಿಮಾನಿಯಾದೆ. ಈ ಸಂಕ್ರಾಂತಿಗೆ ಬಿಡುಗಡೆಯಾಗುತ್ತಿರುವ ಎಲ್ಲಾ ಸಿನಿಮಾಗಳು ಯಶಸ್ವಿಯಾಗಲಿ, ಅದರ ಜೊತೆಗೆ 'ದಿ ರಾಜಾ ಸಾಬ್' ಕೂಡ ಬ್ಲಾಕ್‌ಬಸ್ಟರ್ ಆಗಲಿ" ಎಂದು ಆಶಿಸಿದರು. ಅಲ್ಲದೆ, ನಾಳೆ (ಡಿಸೆಂಬರ್ 29) ಚಿತ್ರದ ಟ್ರೈಲರ್ ಬಿಡುಗಡೆಯಾಗಲಿದೆ ಎಂಬ ಸಿಹಿ ಸುದ್ದಿಯನ್ನು ನೀಡಿದರು. ಮಾರುತಿ ಬರವಣಿಗೆಗೆ ಪ್ರಭಾಸ್ ಮನಸೋತ ಕ್ಷಣ 'ಮಾರುತಿ ಅವರು ಈ ಕಥೆ ಹೇಳಿದಾಗ ನನಗೆ ತುಂಬಾ ಇಷ್ಟವಾಯಿತು. ಚಿತ್ರದ ಕ್ಲೈಮ್ಯಾಕ್ಸ್ ಅದ್ಭುತವಾಗಿದೆ. ಅದನ್ನು ಅವರು ಪೆನ್ನಿನಿಂದ ಬರೆದಿದ್ದಾರೋ ಅಥವಾ ಮೆಷಿನ್ ಗನ್‌ನಿಂದ ಬರೆದಿದ್ದಾರೋ ಎಂಬಂತೆ ಪವರ್‌ಫುಲ್ ಆಗಿದೆ. 15 ವರ್ಷಗಳ ನಂತರ ಅಭಿಮಾನಿಗಳು ನನ್ನಿಂದ ಬಯಸುವ 'ಡಾರ್ಲಿಂಗ್' ಶೈಲಿಯ ಪೂರ್ಣ ಪ್ರಮಾಣದ ಮನರಂಜನೆ ಈ ಚಿತ್ರದಲ್ಲಿದೆ" ಎಂದರು. ಅಲ್ಲದೆ ಹಿರಿಯ ನಟಿ ಜರೀನಾ ವಹಾಬ್ ಅವರ ನಟನೆಯನ್ನು ಮುಕ್ತಕಂಠದಿಂದ ಶ್ಲಾಘಿಸಿದರು. ಮಾರುತಿ ಭಾವುಕ ಮಾತು "ನಾನು 11 ಸಿನಿಮಾಗಳನ್ನು ಮಾಡಿದ್ದೇನೆ, ಆದರೆ ಪ್ರಭಾಸ್ ಅವರು ನನಗೆ 'ರೆಬೆಲ್ ಯೂನಿವರ್ಸಿಟಿ'ಯಲ್ಲಿ ದೊಡ್ಡ ಮಟ್ಟದ ಅವಕಾಶ ನೀಡಿದ್ದಾರೆ. ಈ ಸಿನಿಮಾದ ಎಮೋಷನಲ್ ದೃಶ್ಯಗಳನ್ನು ನೋಡುವಾಗ ನನ್ನ ಕಣ್ಣಲ್ಲೇ ನೀರು ಬಂದಿದೆ. ಒಂದು ವೇಳೆ ಈ ಸಿನಿಮಾ ನಿಮ್ಮನ್ನು ನಿರಾಸೆಗೊಳಿಸಿದರೆ ನನ್ನ ಮನೆ ವಿಳಾಸ ಕೊಡುತ್ತೇನೆ, ಅಲ್ಲಿಗೆ ಬಂದು ಕೇಳಿ" ಎಂದು ನಿರ್ದೇಶಕ ಮಾರುತಿ ಸವಾಲಿನೊಂದಿಗೆ ಭರವಸೆ ನೀಡಿದರು.



## 'ಪ್ಯಾರ್' ಒಂದೇ ಮಾತಲಿ ಹಾಡು ಹಿಟ್

ಎಸ್.ಎಂ. ಪ್ರೊಡಕ್ಷನ್ಸ್ ಲಾಂಛನದಲ್ಲಿ ಹೆಚ್. ಎಸ್. ನಾಗಶ್ರೀ ಅವರು ನಿರ್ಮಿಸಿರುವ ನೂತನ ಚಿತ್ರ ಪ್ಯಾರ್. ಈ ಚಿತ್ರದಲ್ಲಿ ಕ್ರೇಜಿ ಸ್ಟಾರ್ ರವಿಚಂದ್ರನ್ ನಾಯಕಿಯ ತಂದೆಯಾಗಿ ಪ್ರಮುಖ ಪಾತ್ರದಲ್ಲಿ ಕಾಣಿಸಿಕೊಂಡಿದ್ದು, ರಿಶ್ವಿನ್, ರಾಶಿಕಾ ಶೆಟ್ಟಿ ನಾಯಕ, ನಾಯಕಿಯಾಗಿ ಬಣ್ಣ ಹಚ್ಚಿದ್ದಾರೆ. ಚಿತ್ರಕ್ಕೆ ಎಸ್. ಸುಪ್ರೀತ್ ಕಥೆ, ಚಿತ್ರಕಥೆ ಬರೆದು ಆಕ್ಷನ್ ಕಟ್ ಹೇಳಿದ್ದಾರೆ. ಆನ್ ಎಮೋಷನಲ್‌ಜರ್ನಿ ಆಫ್ ಲವ್ ಎಂಬ ಅಡಿಬರಹ ಈ ಚಿತ್ರಕ್ಕಿದೆ. ಈಗಾಗಲೇ ರಿಲೀಸಾಗಿ, ಸಂಗೀತ ಪ್ರಿಯರ ಮನ ಗೆದ್ದಿರುವ 'ಒಂದೇ ಮಾತಲಿ ಹೇಳೋದಾದರೆ' ಎಂಬ ಹಾಡಿನ ಸುಂದರ ವೀಡಿಯೋ ಇನ್ ಸ್ಟಾಗ್ರಾಂನಲ್ಲಿ 100 ಮಿಲಿಯನ್ ಗೂ ಹೆಚ್ಚು ವೀಕ್ಷಣೆಯಾಗಿದೆ. ಅಲ್ಲದೆ ಮಿಲಿಯನ್ ಪ್ಲಸ್ ವ್ಯೂಸ್ ಆಗಿದೆ. ಪಳನಿ ಡಿ. ಸೇನಾಪತಿ ಅವರ ಸಂಗೀತ, ಕೆ.ಎಸ್. ಚಂದ್ರಶೇಖರ್ ಅವರ ಕ್ಯಾಮರಾದಲ್ಲಿ ಲಡಾಕ್‌ನ ರಮಣೀಯ ಪರಿಸರದಲ್ಲಿ ಈ ಹಾಡನ್ನು ಸೆರೆ ಹಿಡಿಯಲಾಗಿದೆ. ಇತ್ತೀಚೆಗೆ ನಡೆದ ಪತ್ರಿಕಾಗೋಷ್ಠಿಯಲ್ಲಿ ಈ ಹಾಡಿನ ಯಶಸ್ಸಿನ ಖುಷಿಯನ್ನು ಚಿತ್ರತಂಡ ಮಾಧ್ಯಮದೊಂದಿಗೆ ಹಂಚಿಕೊಂಡಿತು. ಮೊದಲಿಗೆ ಈ ಚಿತ್ರಕ್ಕೆ ಬೆನ್ನೆಲುಬಾಗಿ ನಿಂತಿರುವ ಡಾ.ಬಿಎಸ್.ನಾಗರಾಜು ಮಾತನಾಡುತ್ತ ಲಡಾಕ್, ಕಾಶ್ಮೀರ, ಜೈಸ್ಲೇರ್‌ನಲ್ಲಿ ಶೂಟ್ ಮಾಡಲಾಗಿರುವ ಈ ಹಾಡು ಅದ್ಭುತವಾಗಿ ಮೂಡಿಬಂದಿದೆ ಎಂದರು. ನಿರ್ದೇಶಕ ಸುಪ್ರೀತ್ ಮಾತನಾಡುತ್ತ ನಮ್ಮ ಚಿತ್ರದಲ್ಲಿ ರವಿಸರ್ ಅಭಿನಯಿಸಲು ಒಪ್ಪಿದಾಗ ಈ ಟೈಟಲ್ ಇಟ್ಟದ್ದಕ್ಕೂ ಸಾರ್ಥಕ ಎನಿಸಿತು. ಪ್ರೀತಿ ಪ್ರೇಮದ ಕಥೆಯ ಜತೆಗೆ ತಂದೆ ಮಗಳ ನಡುವಿನ ಭಾವನಾತ್ಮಕ ಸಂಬಂಧವನ್ನೂ ತೆರೆದಿಡುವಂಥ ವಿಭಿನ್ನ ಕಾನ್ಸೆಪ್ಟ್ ನಮ್ಮ ಚಿತ್ರದಲ್ಲಿದೆ. ಕಥೆ ಮಾಡಿಕೊಂಡ ಮೇಲೆ ಮುಖ್ಯವಾಗಿ ಗಮನ ಹರಿಸಿದ್ದೇ ಹಾಡುಗಳ ಮೇಲೆ ಎಂದರು.



## ಉತ್ತರ ಕರ್ನಾಟಕ ಸೊಗಡಿನ 'ಸೂರ್ಯ' ಟ್ರೈಲರ್ ಬಿಡುಗಡೆ

ಉತ್ತರ ಕರ್ನಾಟಕ ಭಾಗದ ಸಾಕಷ್ಟು ನಿರ್ಮಾಪಕ, ನಿರ್ದೇಶಕರು ಕನ್ನಡ ಚಿತ್ರರಂಗಕ್ಕೆ ಬರುತ್ತಿದ್ದಾರೆ. ಅದೇರೀತಿ ಇದೀಗ ಬೆಳಗಾವಿ ಮೂಲದ ಬಸವರಾಜ ಬೆಣ್ಣೆ ಹಾಗೂ ರವಿ ಬೆಣ್ಣೆ ಸಹೋದರರೂ ತಮ್ಮ ಕೊಡುಗೆ ನೀಡಲು ಅಣಿಯಾಗಿದ್ದಾರೆ. ನಂದಿ ಸಿನಿಮಾಸ್ ಅಡಿಯಲ್ಲಿ ಅವರು "ಸೂರ್ಯ" ಎಂಬ ಮಾಸ್ ಲವ್ ಸ್ಟೋರಿ ಒಳಗೊಂಡ ಚಿತ್ರವನ್ನು ನಿರ್ಮಿಸಿದ್ದು, ಸಂಕ್ರಾಂತಿ ಹಬ್ಬದ ಕೊಡುಗೆಯಾಗಿ ಜನವರಿ 15ರಂದು ತೆರೆಗೆ ತರಲಿದ್ದಾರೆ. ಸ್ಲಂನಲ್ಲಿ ಬೆಳೆದ ಯುವಕನೊಬ್ಬ ತನ್ನ ಪ್ರೀತಿಯನ್ನು ಪಡೆದುಕೊಳ್ಳಲು ಏನೆಲ್ಲ ಹೋರಾಟ, ಸಾಹಸ ಮಾಡುತ್ತಾನೆ, ಆತನಿಗೆ ಯಾರೆಲ್ಲ ಸಹಾಯ ಮಾಡುತ್ತಾರೆ ಎಂಬುದನ್ನು ಈ ಚಿತ್ರದ ಮೂಲಕ ನಿರ್ದೇಶಕ ಸಾಗರ್‌ದಾಸ್ ಅವರು ಹೇಳಹೊರಟಿದ್ದಾರೆ. ಯುವನಟ ಪ್ರಶಾಂತ್ ಈ ಚಿತ್ರದಲ್ಲಿ ನಾಯಕನಾಗಿ ನಟಿಸಿದ್ದು, ಹರ್ಷಿತಾ ನಾಯಕಿ ಪಾತ್ರ ನಿರ್ವಹಿಸಿದ್ದಾರೆ. ವೇದಿಕೆಯಲ್ಲಿ ನಿರ್ಮಾಪಕ ಬಸವರಾಜ ಬೆಣ್ಣೆ ಮಾತನಾಡುತ್ತ ಟ್ರೈಲರ್ ಚೆನ್ನಾಗಿ ಮೂಡಿಬಂದಿದೆ. ಪೂನಾದಲ್ಲಿ ಉದ್ಯಮ ನಡೆಸುತ್ತಿರುವ ನಾವು, ಹುಟ್ಟಿಬೆಳೆದ ಕನ್ನಡ ನಾಡಿಗೆ ಏನಾದರೂ ಕೊಡುಗೆ ನೀಡಬೇಕೆಂದು ಈ ಚಿತ್ರ ಮಾಡಿದ್ದೇವೆ. ಅವರ ಸಹೋದರ ರವಿ ಬೆಣ್ಣೆ ಮಾತನಾಡಿ ಜ. 15ಕ್ಕೆ ನಮ್ಮ ಚಿತ್ರ ಬಿಡುಗಡೆಯಾಗಲಿದೆ. ಸಾಗರ್ ಕಥೆ ಹೇಳಿದಾಗ ಬಜೆಟ್ ಜಾಸ್ತಿ ಅನಿಸಿತ್ತು. ಸಿನಿಮಾ ನೋಡಿದಾಗ ನಮ್ಮ ಹಣ ಎಲ್ಲೂ ಹೋಗಿಲ್ಲ ಅನ್ನಿಸಿತು ಎಂದರು. ನಾಯಕ ಪ್ರಶಾಂತ್ ಮಾತನಾಡಿ ಬೆಳೆದ ಹುಡುಗನಾಗಿ ನಾನೀ ಚಿತ್ರದಲ್ಲಿ ಕಾಣಿಸಿಕೊಂಡಿದ್ದೇನೆ. ಆತನಿಗೆ ಹುಡುಗಿಯ ಪ್ರೀತಿ ಆದ ನಂತರ ಹೇಗೆ ಉಳಿಸಿಕೊಳ್ಳುತ್ತಾನೆ ಎನ್ನುವುದೇ ಚಿತ್ರದ ಎಳೆ ಎಂದರು.



## ಟ್ರೇಲರ್‌ನಲ್ಲೇ ಕುತೂಹಲ ಮೂಡಿಸಿದೆ 'ಮಾಜರ್'

ಸಂಗೀತ ಸಿನಿ ಹೌಸ್ ಲಾಂಛನದಲ್ಲಿ ಡಾ। ಮುರುಗನಂದನ್ ಎಮ್ (ಪುಲಿಮುರುಗನ್) ಅವರು ನಿರ್ಮಿಸಿರುವ, ಲೋಕಲ್ ಲೋಕಿ ನಿರ್ದೇಶನದೊಂದಿಗೆ ಪ್ರಮುಖಪಾತ್ರದಲ್ಲೂ ನಟಿಸಿರುವ "ಮಾಜರ್" ಚಿತ್ರದ ಟ್ರೇಲರ್ ಬಿಡುಗಡೆಯಾಗಿದೆ. ಟ್ರೇಲರ್ ಸಾಕಷ್ಟು ಕುತೂಹಲ ಮೂಡಿಸಿದೆ. ಟ್ರೇಲರ್ ಬಿಡುಗಡೆ ನಂತರ ಚಿತ್ರತಂಡದ ಸದಸ್ಯರು ಮಾತನಾಡಿದರು. ದೇಶದಲ್ಲಿ ನಾನು ಕಂಡಿರುವ ನಿರ್ಭಯ ಹತ್ಯೆ ಮೊದಲಾದ ದುರಂತಗಳೆ ಈ ಕಥೆ ಬರೆಯಲು ಮುಖ್ಯ ಕಾರಣ. ಇಂತಹ ಕೃತ್ಯ ಗಳನ್ನು ಪ್ರತಿಯೊಬ್ಬರು ಖಂಡಿಸಬೇಕು. ಹೆಣ್ಣು ಮಕ್ಕಳಿಗೆ ನ್ಯಾಯ ಸಿಗಬೇಕು ಎಂಬುದೆ "ಮಾಜರ್" ಚಿತ್ರದ ಮುಖ್ಯ ಉದ್ದೇಶ. ನಾನು ಈ ಚಿತ್ರವನ್ನು ನಿರ್ದೇಶಿಸುವುದರ ಜೊತೆಗೆ ಮುಖ್ಯಪಾತ್ರದಲ್ಲಿ ಅಭಿನಯ ಕೂಡ ಮಾಡಿದ್ದೇನೆ. ಮುರುಗನಂದನ್ ಅವರು ನಿರ್ಮಾಣ ಮಾಡಿ ದ್ದಾರೆ. ಎ.ಟಿ.ರವೀಶ್ ಸಂಗೀತ ನಿರ್ದೇಶನ, ರಾಜೇಶ್ ರಾಮನಾಥ್ ಹಿನ್ನಲೆ ಸಂಗೀತ ಹಾಗೂ ಗಗನ್ ಗೌಡ, ವಿನಯ್ ಗೌಡ, ಜಗನ್ ಬಾಬು ಅವರ ಛಾಯಾಗ್ರಹಣ "ಮಾಜರ್" ಚಿತ್ರಕ್ಕಿದೆ. ಶ್ರೀಹಾನ್, ದೀಪಕ್, ಉಗ್ರಂ ರವಿ, ಸಂಭ್ರಮಶ್ರೀ, ರಾಜು, ರಂಜನ್, ಅಜಯ್ ಶರ್ಮ ಮುಂತಾದವರು ಈ ಚಿತ್ರದಲ್ಲಿ ನಟಿಸಿದ್ದಾರೆ.



## ಮಲೇಷ್ಯಾದಲ್ಲಿ ಇತಿಹಾಸ ಸೃಷ್ಟಿಸಿದ 'ಜನನಾಯಕನ್' ಆಡಿಯೋ ಲಾಂಚ್

ಮಲೇಷ್ಯಾದಲ್ಲಿ ನಡೆದ 'ಜನನಾಯಕನ್' ಚಿತ್ರದ ಭವ್ಯ ಆಡಿಯೋ ಬಿಡುಗಡೆ ಸಮಾರಂಭವು ಕೇವಲ ಸಿನಿಮಾ ಸಂಭ್ರಮವಾಗಿ ಉಳಿಯದೆ, ಒಂದು ಐತಿಹಾಸಿಕ ಕ್ಷಣಕ್ಕೆ ಸಾಕ್ಷಿಯಾಯಿತು. ಈ ಅದ್ಭುತ ಕಾರ್ಯಕ್ರಮವು ಮಲೇಷ್ಯಾದಲ್ಲಿ ಅತಿ ಹೆಚ್ಚು ಜನರು ಭಾಗವಹಿಸಿದ ಆಡಿಯೋ ಬಿಡುಗಡೆ ಸಮಾರಂಭ ಎಂಬ ಹೆಗ್ಗಳಿಕೆಯೊಂದಿಗೆ ಅಧಿಕೃತವಾಗಿ 'ಮಲೇಷಿಯನ್ ಬುಕ್ ಆಫ್ ರೆಕಾರ್ಡ್ಸ್'ಗೆ ಸೇರ್ಪಡೆಯಾಗಿದೆ. ಕಾರ್ಯಕ್ರಮದ ಪ್ರಮುಖ ಮುಖ್ಯಾಂಶಗಳು ಕಾರ್ಯಕ್ರಮದ ಆರಂಭದಲ್ಲಿ ದಳಪತಿ ವಿಜಯ್ ಅವರ ತಾಯಿ ನೀಡಿದ ವಿಶೇಷ ಪ್ರದರ್ಶನವು ಪ್ರೇಕ್ಷಕರನ್ನು ಭಾವುಕರನ್ನಾಗಿಸಿತು. ವಿಜಯ್ ಅವರು ವೇದಿಕೆಯ ಮೇಲೆ ಓಡಿ ಹೋಗಿ ತಮ್ಮ ತಂದೆಯನ್ನು ಆಲಂಗಿಸಿಕೊಂಡ ಕ್ಷಣವು ಇಡೀ ಕ್ರೀಡಾಂಗಣದಲ್ಲಿ ಚಪ್ಪಾಳೆ ಮತ್ತು ಹರ್ಷೋದ್ಗಾರಗಳನ್ನು ಮೊಳಗಿಸಿತು. ನಿರ್ದೇಶಕ ಹೆಚ್. ವಿನೋತ್ ಮಾತನಾಡಿ, ಇದು ನೂರಕ್ಕೆ ನೂರರಷ್ಟು ದಳಪತಿ ವಿಜಯ್ ಅವರ ಸಿನಿಮಾ ಹಾಗೂ ಅವರ ಸಿದ್ಧಾಂತ ಮತ್ತು ಅಭಿಮಾನಿಗಳೊಂದಿಗಿನ ಬಾಂಧವ್ಯದ ಆಚರಣೆಯಾಗಿದೆ ಎಂದು ಖಚಿತಪಡಿಸಿದರು.



## ಕ್ರಿಸ್ಮಸ್ ರೇಸ್‌ನಲ್ಲಿ ಗೆದ್ದ ಕಿಚ್ಚನ 'ಮಾರ್ಕ್'

ಕಿಚ್ಚ ಸುದೀಪ್ ನಟನೆಯ 'ಮಾರ್ಕ್' ಸಿನಿಮಾ ಕ್ರಿಸ್‌ಮಸ್ ಬ್ಲಾಕ್‌ಬಸ್ಟರ್‌ಗಳಲ್ಲಿ ಒಂದಾಗಿ ಹೊರಹೊಮ್ಮಿದೆ. ಕ್ರಿಸ್ಮಸ್‌ಗೆ ಬಿಡುಗಡೆಯಾದ ಚಿತ್ರ ಪ್ರೇಕ್ಷಕರ ಮೆಚ್ಚುಗೆ ಪಡೆಯುವಲ್ಲಿ ಯಶಸ್ವಿಯಾಗಿದೆ. ಮಾರ್ಕ್ ಚಿತ್ರವು ಬಾಕ್ಸ್ ಆಫೀಸ್‌ನಲ್ಲಿ ಒಳ್ಳೆ ಕಮಾಯಿ ಮಾಡಿದೆ. ಮಾರ್ಕ್ ಸಿನಿಮಾ ಮೊದಲ ವಾರಾಂತ್ಯದಲ್ಲಿಯೇ 35ಕೋಟಿ ಗಳಿಕೆ ಮಾಡಿದೆ. ವೀಕೆಂಡ್‌ನಲ್ಲಿ ಮಾತ್ರವಲ್ಲದೆ ಸೋಮವಾರವೂ ಕಿಚ್ಚನ ಚಿತ್ರ ಹೌಸ್‌ಫುಲ್ ಪ್ರದರ್ಶನ ಕಾಣುತ್ತಿದೆ. ಸಿನಿಮಾ ವಿಮರ್ಶಕರು ಹಾಗೂ ವಿತರಕರು ಮಾರ್ಕ್ ಸಿನಿಮಾವನ್ನು ಕಮರ್ಷಿಯಲ್ ಹಿಟ್ ಎಂದು ಶ್ಲಾಘಿಸಿದ್ದಾರೆ. ಹಿಂದಿ ಹಾಗೂ ಹಾಲಿವುಡ್ ಸಿನಿಮಾಗಳಿಗೆ ಟಕ್ಕರ್ ಕೊಟ್ಟು ದೊಡ್ಡ ಮಟ್ಟದ ಗೆಲುವನ್ನು ಕಿಚ್ಚನ ಸಿನಿಮಾ ಪಡೆದುಕೊಂಡಿದೆ. ಮೈಸೂರು, ಶಿವಮೊಗ್ಗ, ತುಮಕೂರು, ಬೆಂಗಳೂರು, ದಾವಣಗೆರೆ ಮತ್ತು ಚಾಮರಾಜನಗರದಾದ್ಯಂತದ ಹಲವಾರು ಸಿಂಗಲ್-ಸ್ಕ್ರೀನ್ ಚಿತ್ರಮಂದಿರಗಳು ನಾಲ್ಕನೇ ದಿನವೂ ಹೌಸ್‌ಫುಲ್ ಪ್ರದರ್ಶನಗಳನ್ನು ಕಂಡಿದೆ. ಕಿಚ್ಚನ ಸ್ವಾಗ್, ಸ್ಟೈಲು, ಆಟಿಟ್ಯೂಡ್ ಕಂಡು ಚಿತ್ರರಸಿಕರು ಫಿದಾ ಆಗಿದ್ದಾರೆ.



## ಡಾ. ಸಂಗಮೇಶ ಉಪಾಸೆ ನಿರ್ದೇಶನದಲ್ಲಿ ಗಲಿಬಿಲಿ ಗೋವಿಂದ

ಕಿರುತೆರೆಯ 'ಸಿಲ್ಲಿ ಲಲ್ಲಿ' ಧಾರವಾಹಿಯಲ್ಲಿ 'ಅರ್ಥವಾಯಿತು ಬಿಡಿ' ಎಂದು ನಗಿಸುತ್ತಿದ್ದ ಡಾ.ಸಂಗಮೇಶ ಉಪಾಸೆ ಸಾಕಷ್ಟು ಚಿತ್ರಗಳಲ್ಲಿ ಕಾಮಿಡಿ ರೋಲ್‌ಗಳಲ್ಲಿ ಕಾಣಿಸಿಕೊಂಡಿದ್ದರು. ಇದೆಲ್ಲಾದರ ಅನುಭವದಿಂದ ಹೊಸ ಪ್ರಯತ್ನ, ಸಾಧನೆ ಎನ್ನುವಂತೆ ಈಗ 'ಗಲಿಬಿಲಿ ಗೋವಿಂದ' ಚಿತ್ರದ ಮುಖಾಂತರ ನಿರ್ದೇಶನ ಜವಬ್ದಾರಿಯನ್ನು ಹೊತ್ತುಕೊಳ್ಳುವ ಜತೆಗೆ ಕಥೆ,ಚಿತ್ರಕಥೆ, ಸಂಭಾಷಣೆ, ಸಾಹಿತ್ಯ ಬರೆದು ಮುಖ್ಯ ಪಾತ್ರದಲ್ಲಿ ನಟಿಸುತ್ತಿದ್ದಾರೆ. ಇವರ ಶ್ರಮಕ್ಕೆ ಬಿಜಾಪುರ ಮೂಲದ ಸಮಾನ ಮನಸ್ಕರುಗಳಾದ ಅಂಬರೀಷ ಬಣಜಿಗೇರ, ಸಂದೀಪ್ ರಾಠೋಡ್, ಚಿದಾನಂದ ಪರಗೊಂಡ, ಮಡಿವಾಳಪ್ಪ ಎಮ್. ಗೋಗಿ ಮತ್ತು ಚಿದಾನಂದ ಪತ್ತಾರ ಜಂಟಿಯಾಗಿ ಬಂಡವಾಳ ಹೂಡುತಿದ್ದಾರೆ.



## ನಗ್ನಸತ್ಯಗೆ ಪ್ರಶಂಸೆಯ ಸುರಿಮಳೆ

ಚಂದನವನದ ಅನುಭವಿ ತಂತ್ರಜ್ಞ ರಮೇಶ್ ಕಾಮತ್ ಗ್ಯಾಪ್ ನಂತರ 'ನಗ್ನಸತ್ಯ' ಎಂಬ ಕೊಂಕಣಿ ಸಿನಿಮಾಕ್ಕೆ ಕಥೆ, ಚಿತ್ರಕಥೆ, ಸಂಭಾಷಣೆ, ಎರಡು ಹಾಡುಗಳಿಗೆ ಸಾಹಿತ್ಯ ಬರೆದು ನಿರ್ದೇಶನ ಮಾಡಿದ್ದಾರೆ. ಕಿರಣ್ಮಯಿ ಪತಿಗೆ ಬೆಂಗಾವಲಾಗಿ ಆದಿತ್ಯ ಸಿನಿ ಕ್ರಿಯೇಶನ್ಸ್ ಅಡಿಯಲ್ಲಿ ಬಂಡವಾಳ ಹೂಡಿದ್ದಾರೆ. ಮೊನ್ನೆಯಷ್ಟೇ ಸಿನಿಪಂಡಿತರುಗಳು ಹಾಗೂ ಗಣ್ಯರುಗಳಿಗೆ ವಿಶೇಷ ಪ್ರದರ್ಶನ ಏರ್ಪಾಟು ಮಾಡಲಾಗಿತ್ತು. ಹಿರಿಯ ನಟಿ ಪದ್ಮವಾಸತಿ ಮಾತನಾಡಿ ಇಂತಹ ಚಿತ್ರಗಳು ಜನರಿಗೆ ತಲುಪಬೇಕು. ನಿರ್ದೇಶಕರು ಇದೇ ಕೊನೆ ಚಿತ್ರ ಎನ್ನುತ್ತಿದ್ದಾರೆ. ಮುಂದೆಯೂ ಇಂತಹುದೆ ಉತ್ತಮ ಚಿತ್ರಗಳನ್ನು ಕೊಡುತ್ತಾ ಇರಿ ಎಂದರು. ನಟ, ನಿರ್ದೇಶಕ ಎಂ.ಡಿ. ಕೌಶಿಕ್, ಹಿರಿಯ ಪತ್ರಕರ್ತ ಸದಾಶಿವ ಶೆಣೈ ಸೇರಿದಂತೆ ಹಲವರಿಂದ ಸಿನಿಮಾ ಕುರಿತಂತೆ ಪ್ರಶಂಸೆಯ ನುಡಿಗಳು ಕೇಳಿಬಂದವು. ಕಳೆದ ವರ್ಷ ರಾಷ್ಟ್ರ ಪ್ರಶಸ್ತಿ ಪಡೆದ 'ಕಂದೀಲು' ಚಿತ್ರದಲ್ಲಿ ಗುರುತಿಸಿಕೊಂಡಿದ್ದ ತಂತ್ರಜ್ಞರು ನಗ್ನಸತ್ಯದಲ್ಲಿ ಕೆಲಸ ಮಾಡಿರುವುದು ವಿಶೇಷ.



## ವಿಜಯ್ ನಿರ್ದೇಶನದ ಹೇಮಂತ್ ಕುಮಾರ್ ನಟಿಸಿರುವ ಚಿತ್ರ ಫೆ.20ಕ್ಕೆ ತೆರೆಗೆ

LA ಪ್ರೊಡಕ್ಷನ್ಸ್ ಲಾಂಛನದಲ್ಲಿ ಆನಂದ ಕುಮಾರ್ ಅವರು ನಿರ್ಮಾಣ ಮಾಡಿರುವ, ವಿಜಯ್ ನಿರ್ದೇಶನದ ಹಾಗೂ ಯುವ ಪ್ರತಿಭೆ ಹೇಮಂತ್ ಕುಮಾರ್ ನಾಯಕನಾಗಿ ನಟಿಸಿರುವ 'ಆಲ್ಫಾ #men love vengeance' ಚಿತ್ರ ಆರಂಭದಿಂದಲೂ ಸಾಕಷ್ಟು ಸದ್ದು ಮಾಡುತ್ತಿದೆ. ಇತ್ತೀಚೆಗೆ ಈ ಚಿತ್ರದ ಮೊದಲ ಹಾಡು ಜ್ಞಾನಪೀಠ ಪ್ರಶಸ್ತಿ ವಿಜೇತ ಮಾಸ್ತಿ ವೆಂಕಟೇಶ ಅಯ್ಯಂಗಾರ್ ಅವರ ಊರು ಮಾಸ್ತಿಯಲ್ಲಿ ಬಿಡುಗಡೆಯಾಗಿದೆ. ಈ ಚಿತ್ರಕ್ಕಾಗಿ ನಾಗಾರ್ಜುನ ಶರ್ಮ ಅವರು ಬರೆದಿರುವ, ಅನೂಪ್ ಸೀಳಿನ್ ಸಂಗೀತ ಸಂಯೋಜಿಸಿರುವ ಹಾಗೂ ಅನುರಾಗ್ ಕುಲಕರ್ಣಿ ಅವರು ಹಾಡಿರುವ "ರಾವಾ ರಾವಾ" ಎಂಬ ಹಾಡು ಮಾಸ್ತಿಯಲ್ಲಿ ನಡೆದ 70ನೇ ಕನ್ನಡ ರಾಜ್ಯೋತ್ಸವ ಸಮಾರಂಭದಲ್ಲಿ ಬಿಡುಗಡೆಯಾಗಿದ್ದು, ಶಾಸಕರಾದ ನಂಜೇಗೌಡ ಅವರು ಈ ಹಾಡನ್ನು ಅನಾವರಣ ಮಾಡಿದ್ದಾರೆ.





ಕರಾವಳಿ ತರಂಗಿಣಿ

# ಸಿನಿ ತರಂಗಿಣಿ


## ಹೊಸ ವರ್ಷದ ಶುಭಾಶಯಗಳು

ಕಾಲ ಬದಲಾಗುತ್ತಿದೆ.. ನಾವು ಬದಲಾಗೋಣ..
ಚಿತ್ರರಂಗದ ಹಿರಿಮೆಯನ್ನು ಕಾಪಾಡೋಣ..
ಕನ್ನಡ ಬಳಸೋಣ.. ಚಿತ್ರರಂಗ ಬೆಳೆಸೋಣ..

**ಕನ್ನಡ ಚಲನಚಿತ್ರ ನಿರ್ಮಾಪಕರ ಸಂಘ(ರಿ)**

2026–28ರ ಸಾಲಿನ ಜನವರಿ 10ರಂದು ನಡೆಯಲಿರುವ ಚುನಾವಣೆಯಲ್ಲಿ
ನಾನು ಕಾರ್ಯಕಾರಿ ಸಮಿತಿ ಸದಸ್ಯನ ಸ್ಥಾನಕ್ಕೆ ಸ್ಪರ್ಧಿಸುತ್ತಿದ್ದೇನೆ.
ತಾವುಗಳು ತಮ್ಮ ಅತ್ಯಮೂಲ್ಯವಾದ ಮತವನ್ನು ನನಗೆ ನೀಡಿ ನನ್ನನ್ನು ಜಯಶೀಲರನ್ನಾಗಿ ಮಾಡಬೇಕೆಂದು ತಮ್ಮಲ್ಲಿ ಪ್ರಾರ್ಥಿಸುತ್ತೇನೆ.



**ಎನ್ನಾರ್ ಕೆ ವಿಶ್ವನಾಥ್**
ಶ್ರೀ ಅನಂತಪದ್ಮನಾಭ ಎಂಟರ್‌ಪ್ರೈಸಸ್
- ದೂ ಸಂ: 9448557388


## “ಡಿ”ಗೆ ಸಿಕ್ಕಿತು ಫೆಬ್ರವರಿಯಲ್ಲಿ ಬಿಡುಗಡೆಯ ಭಾಗ್ಯ



ತಿರುಮಲೇಶ್ ವಿ ನಿರ್ದೇಶನದ ಅದ್ವಿತ ಫಿಲಂ ಫ್ಯಾಕ್ಟರಿ ಹಾಗೂ ಮಸ್ಕ್ಯುಲರ್ ಗ್ರೂಪ್ ಲಾಂಛನದಲ್ಲಿ ಭಾರ್ಗವಿ ಮುರಳಿ ಹಾಗೂ ರಂಗನಾಥ್ ಬಿ ನಿರ್ಮಿಸಿರುವ “ಆಪರೇಶನ್ ಡಿ” ಚಿತ್ರವನ್ನು 2026 ಫೆಬ್ರವರಿಯಲ್ಲಿ ಬಿಡುಗಡೆ ಮಾಡಲು ಚಿತ್ರತಂಡ ನಿರ್ಧರಿಸಿದ್ದಾರೆ. “ಆಪರೇಷನ್ ಡಿ” ಸಸ್ಪೆನ್ಸ್ ಥ್ರಿಲ್ಲರ್ ಹಾಗೂ ಮರ್ಡರ್ ಮಿಸ್ಟರಿ ಕಥೆ ಆಧರಿಸಿದ ಚಿತ್ರ ಬಹುತೇಕ ರಂಗಭೂಮಿ ಕಲಾವಿದರೆ ಇದರಲ್ಲಿ ಅಭಿನಯಿಸಿದ್ದಾರೆ. ಚಿತ್ರದಲ್ಲಿ ನಾಲ್ಕು ಹಾಡುಗಳಿದೆ, ವೇದಿಕ ಕೆಂಪಗಿರಿ ತಿರುಮಲೇಶ್ ಹಾಡನ್ನು ಬರೆದಿದ್ದಾರೆ , ಭಗೀರ, ಡೆವಿಲ್, ಮಾರ್ಕ್ ಖ್ಯಾತಿಯ ಗಾಯಕ ಅನಿರುದ್ಧ ಶಾಸ್ತ್ರಿ ಅವರ ಮೊದಲ ಆಲ್ಬಮ್, ಈ ಸಿನಿಮಾದ ಮೂಲಕ ಅವರು ಒಂದೇ ಸಿನಿಮಾದಲ್ಲಿ 4 ಹಾಡನ್ನು ಹಾಡಿದ್ದಾರೆ. ಭಾರ್ಗವಿ ಮುರಳಿ, ರಂಗನಾಥ್ ಹಾಗೂ ಸುರೇಶ್ ನಿರ್ಮಾಣದ ಹೊಣೆಯನ್ನು ಹೊತ್ತಿದ್ದಾರೆ.

## ‘ಫಾದರ್’ ಅಪ್ಪ ಮಗನ ಬಾಂಧವ್ಯದ ಸಿನಿಮಾ..

‘ಫಾದರ್’ ಭಾವುಕ ಪಯಣಕ್ಕೆ ಕರೆದೊಯ್ಯುವ, ಕಣ್ಣಂಚಲ್ಲಿ ನೀರು ತರೆಸುವ, ಹೃದಯದ ಲಬ್ ಡಬ್ ಹೆಚ್ಚಿಸುವ, ಅಪ್ಪನ ಬೆಲೆ ತಿಳಿಸುವ, ಚಿತ್ರ ಆಗಲಿದೆ ಎನ್ನುವ ಸೂಚನೆ, ಈ ಥೀಮ್ ವಿಡಿಯೋ ನೋಡಿದವರಿಗೆ ಗೊತ್ತಾಗುತ್ತಿದೆ. ತಂದೆಯ ಪಾತ್ರದಲ್ಲಿ ಪ್ರಕಾಶ್ ರಾಜ್, ಮಗನ ಪಾತ್ರದಲ್ಲಿ ಡಾರ್ಲಿಂಗ್ ಕೃಷ್ಣ ಹಾಗೂ ಆರ್ ಚಂದ್ರು ಸುಪರ್ದಿ, ಈ ಅಪರೂಪದ ಕಾಂಬೋದಲ್ಲಿ ಬರುತ್ತಿರುವ ‘ಫಾದರ್’, ಸಾಕಷ್ಟು ನಿರೀಕ್ಷೆ ಹುಟ್ಟಿಸಿದೆ. ಸಿನಿಮಾದ ಮೇಲೆ ಎಲ್ಲರಿಗೂ ಅಭಿಮಾನ, ಕ್ರೇಜ್ ಹೆಚ್ಚಿಸಿದೆ. ಆರ್ ಸಿ ಸ್ಟುಡಿಯೋಸ್ ನಿರ್ಮಾಣದ ಸಿನಿಮಾ ಅಂದ ಮೇಲೆ ಎಲ್ಲಾ ಭಾಷೆಯಲ್ಲೂ ಬರುವುದು ಖಚಿತ, ಇದೊಂದು ಸೂಪರ್‌ಗುಡ್ ಎಮೋಷನಲ್ ಕಂಟೆಂಟ್ ಸಿನಿಮಾ. ಪ್ರಕಾಶ್ ರಾಜ್, ಡಾರ್ಲಿಂಗ್ ಕೃಷ್ಣ, ಅಮೃತಾ ಅಯ್ಯಂಗಾರ್, ನಾಗಭೂಷಣ್ ಮುಖ್ಯ ಪಾತ್ರದಲ್ಲಿದ್ದಾರೆ.











KARAVALI THARANGINI Weekly Owned, Editor, Published & Printed by Lalithasri Preetham Rai No.2-64/54(12), Pushparaj Nilaya, Jayanagara, 3rd ‘A’ Maroli Village, Dakshina Kannada, Karnataka - 575005.
email: karavalitharangini@gmail.com, web: karavalitharangini.com ph: 9880109212 Printed at Bhima Samskruthi Printers & Publishers, No 1182 14th Main Road Prakash Nagar, Bengaluru Karnataka-560021